ಸಂಪುಟ 01 | ಸಂಚಿಕೆ 116 | ಶನಿವಾರ 14 ಮಾರ್ಚ್ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

**ಪೈ ಡೇ (Pi Day)**
ಗಣಿತದಲ್ಲಿ ಬಳಸುವ ಪ್ರಮುಖ ಸ್ಥಿರಾಂಕ ? (ಋ) = 3.14 ಅನ್ನು ಗೌರವಿಸಲು ಪ್ರತಿ ವರ್ಷ ಮಾರ್ಚ್ 14 ರಂದು ಈ ದಿನವನ್ನು ಆಚರಿಸಲಾಗುತ್ತದೆ.
ದಿನಾಂಕ 3/14 (ಮಾರ್ಚ್ 14) ಪೈ ಮೌಲ್ಯದ ಮೊದಲ ಮೂರು ಅಂಕೆಗಳಾದ 3.14 ಅನ್ನು ಸೂಚಿಸುತ್ತದೆ.
ಶಾಲೆಗಳು ಮತ್ತು ಕಾಲೇಜುಗಳಲ್ಲಿ ಗಣಿತ ಸ್ಪರ್ಧೆಗಳು, ಪಜಲ್‌ಗಳು ಮತ್ತು ವಿಜ್ಞಾನ ಚಟುವಟಿಕೆಗಳನ್ನು ನಡೆಸಲಾಗುತ್ತದೆ.

**2. ಅಂತರರಾಷ್ಟ್ರೀಯ ಗಣಿತ ದಿನ (International Day of Mathematics)**
ಈ ದಿನವನ್ನು ಗಓಇಖಅಔ ಪ್ರೇರಣೆಯಿಂದ ಗಣಿತದ ಮಹತ್ವವನ್ನು ಜನರಿಗೆ ತಿಳಿಸಲು ಆಚರಿಸಲಾಗುತ್ತದೆ.
ವಿದ್ಯಾರ್ಥಿಗಳು ಮತ್ತು ಸಂಶೋಧಕರಲ್ಲಿ ಗಣಿತದ ಆಸಕ್ತಿ ಹೆಚ್ಚಿಸಲು ವಿವಿಧ ಕಾರ್ಯಕ್ರಮಗಳು, ಕಾರ್ಯಾಗಾರಗಳು ಹಾಗೂ ಉಪನ್ಯಾಸಗಳು ನಡೆಯುತ್ತವೆ.

**3. ಅಂತರರಾಷ್ಟ್ರೀಯ ನದಿಗಳ ರಕ್ಷಣಾ ದಿನ (International Day of Action for Rivers)**
ನದಿಗಳ ಸಂರಕ್ಷಣೆ ಮತ್ತು ಶುದ್ಧ ನೀರಿನ ಮಹತ್ವವನ್ನು ಜಗತ್ತಿಗೆ ತಿಳಿಸಲು ಈ ದಿನ ಆಚರಿಸಲಾಗುತ್ತದೆ.
ಪರಿಸರ ಸಂಘಟನೆಗಳು ನದಿಗಳ ರಕ್ಷಣೆಗೆ ಜಾಗೃತಿ ಕಾರ್ಯಕ್ರಮಗಳು ಮತ್ತು ಅಭಿಯಾನಗಳನ್ನು ನಡೆಸುತ್ತವೆ

## ಸುಭಾಷಿತ

"ಸಂತೋಷವು ನಿಮ್ಮೊಳಗಿದೆ, ಅದನ್ನು ಬೇರೆಡೆ ಹುಡುಕಬೇಡಿ."

–ಅಪರಿಚಿತ

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ವಿಧಾನಸಭೆಯಲ್ಲಿ ಪ್ರತಿಧ್ವನಿಸಿದ ವೈದ್ಯರ ವರ್ಗಾವಣೆ ವಿಚಾರ

**ಬೆಂಗಳೂರು: ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿನ ವೈದ್ಯರ ವರ್ಗಾವಣೆ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ವಿಲೀನಗೊಳಿಸುವುದರ ವಿರುದ್ಧ ಪಕ್ಷಭೇದ ಮರೆತು ವಿಧಾನಸಭೆಯಲ್ಲಿಂದು ಸದಸ್ಯರು ಆಕ್ರೋಶ ವ್ಯಕ್ತಪಡಿಸಿದರು.**



ಪ್ರಶ್ನೋತ್ತರದ ಬಳಿಕ ಜೆಡಿಎಸ್‌ನ ಶಾರದಾ ನಾಯಕ್, ಶಿವಮೊಗ್ಗದಲ್ಲಿ ಸಮುದಾಯ ಆರೋಗ್ಯ ಕೇಂದ್ರದಲ್ಲಿದ್ದ ತಜ್ಞ ವೈದ್ಯರನ್ನು ತಾಲೂಕು ಆಸ್ಪತ್ರೆಗಳಿಗೆ ವರ್ಗಾವಣೆ ಮಾಡಲಾಗಿದೆ. ಹೀಗಾಗಿ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಸರಿಯಾದ ಚಿಕಿತ್ಸೆ ಸಿಗುತ್ತಿಲ್ಲ, ವೈದ್ಯರನ್ನು ರಕ್ಷಣೆ ಕರ್ತವ್ಯದಿಂದ ಬಿಡುಗಡೆಗೊಂಡು ವರ್ಗಾವಣೆಯಲ್ಲಿ ನಿಯೋಜನೆಗೊಂಡಿರುವ ಸ್ಥಳದಲ್ಲಿ ವರದಿ ಮಾಡಿಕೊಳ್ಳುವಂತೆ ಬೆಂಗಳೂರಿನಿಂದ ಹಿರಿಯ ಅಧಿಕಾರಿಗಳು ಕರೆ ಮಾಡಿ, ತಜ್ಞ ವೈದ್ಯರ ಮೇಲೆ ಒತ್ತಡ ಹೇರುತ್ತಿದ್ದಾರೆ. ಈ ಬಗ್ಗೆ ಈ ಮೊದಲು ವಿಧಾನಸಭೆಯಲ್ಲಿ ಚರ್ಚಿಸಲಾಗಿತ್ತು ಅರ್ಧ ಗಂಟೆ ವಿಸ್ತೃತ ಚರ್ಚೆಗೆ ಅವಕಾಶ ನೀಡುವುದಾಗಿ ಸಭಾಧ್ಯಕ್ಷರು ಭರವಸೆ ನೀಡಿದ್ದರು. ಅದರಂತೆ ಈಗಾಗಲೇ ಚರ್ಚೆಗೆ ಅವಕಾಶ ನೀಡಿ ಎಂದು ಪಟ್ಟು ಹಿಡಿದರು.

ಇದಕ್ಕೆ ಬಿಜೆಪಿಯ ಸುನೀಲ್ ಕುಮಾರ್, ಚನ್ನಬಸಪ್ಪ, ಕಾಂಗ್ರೆಸ್‌ನ ಅಶೋಕ್‌ಕುಮಾರ್ ರೈ ಸೇರಿದಂತೆ ಹಲವಾರು ಮಂದಿ ಧ್ವನಿಗೂಡಿಸಿದರು. ಒಂದು ಹಂತದಲ್ಲಿ ಎಲ್ಲಾ ಶಾಸಕರು ಗದ್ದಲ ಮಾಡಿ ವೈದ್ಯರ ವರ್ಗಾವಣೆಯನ್ನು ಹಿಂಪಡೆಯಬೇಕು. ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮುಚ್ಚುವ ನಿರ್ಧಾರವನ್ನು ಕೈಬಿಡಬೇಕು ಎಂದು ಒತ್ತಾಯಿಸಿದರು. ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ್ ಸ್ವಯಂ ಪ್ರೇರಿತ ಹೇಳಿಕೆ ನೀಡಿ ನಿನ್ನೆ ಸಚಿವ ಸಂಪುಟ ಸಭೆಯಲ್ಲಿ ಈ ಬಗ್ಗೆ ಚರ್ಚೆಯಾಗಿದೆ. ವೈದ್ಯರ ವರ್ಗಾವಣೆ ಮಾಡಬಾರದು ಎಂದು ಮುಖ್ಯಮಂತ್ರಿ ಅವರು ಸೂಚನೆ ನೀಡಿದ್ದಾರೆ ಎಂದರೂ ಕೂಡ ಸದಸ್ಯರು ಗದ್ದಲ ನಿಲ್ಲಿಸಲಿಲ್ಲ.

ಗೃಹ ಸಚಿವ ಪರಮೇಶ್ವರ್ ಮಧ್ಯ ಪ್ರವೇಶ ಮಾಡಿ, ಸಂಪುಟದಲ್ಲಿ ಚರ್ಚೆಗಳಾಗಿವೆ. ಒಂದು ವೇಳೆ ವೈದ್ಯರ ವರ್ಗಾವಣೆಯಾಗಿದ್ದರೆ ಅವರನ್ನು ಮರಳಿ ಕೆಲಸ ನಿರ್ವಹಿಸುತ್ತಿದ್ದ ಸ್ಥಳಕ್ಕೆ ವಾಪಸ್ ಕಳುಹಿಸಲಾಗುವುದು. ಈ ಬಗ್ಗೆ ಮುಖ್ಯಮಂತ್ರಿಯವರು, ಆರೋಗ್ಯ ಸಚಿವರಿಗೆ ಸೂಚನೆ ನೀಡಿದ್ದಾರೆ ಎಂದರು. ತಾಲೂಕು ಆಸ್ಪತ್ರೆಗಳಲ್ಲಿ ಪ್ರಸೂತಿ ಮತ್ತು ಮಕ್ಕಳ ಆರೋಗ್ಯಕ್ಕೆ ಒತ್ತು ನೀಡುವ ಸಲುವಾಗಿ ತಜ್ಞ ವೈದ್ಯರನ್ನು ಪುನರ್ ನಿಯೋಜನೆ ಮಾಡುತ್ತಿರುವುದಾಗಿ ಆರೋಗ್ಯ ಸಚಿವರು ವಿವರಣೆ ನೀಡಿದ್ದಾರೆ. ಸದ್ಯಕ್ಕೆ ಅದ್ಯಾವುದನ್ನು ಮಾಡದಂತೆ ಮುಖ್ಯಮಂತ್ರಿ ಅವರು ಕರೆ ನೀಡಿದ್ದಾರೆ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿಯೂ ಸೇವೆ ಮುಂದುವರಿಯಲಿದೆ ಎಂದರು.

ಸದಸ್ಯರು ಇದನ್ನು ಒಪ್ಪದೆ ವರ್ಗಾವಣೆಯಾಗಿರುವ ವೈದ್ಯರು ಬೇರೆ ಕಡೆ ಕರ್ತವ್ಯಕ್ಕೆ ವರದಿ ಮಾಡಿಕೊಂಡರೆ ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ಸಮಸ್ಯೆಯಾಗುತ್ತದೆ ಎಂದು ಪ್ರತಿಪಾದಿಸಿದರು. ಸಭಾಧ್ಯಕ್ಷರು ಮಧ್ಯಪ್ರವೇಶ ಮಾಡಿ, ಪ್ರಾಥಮಿಕ ಆರೋಗ್ಯ ಕೇಂದ್ರಗಳ ವಿಲೀನವನ್ನು ಕೈ ಬಿಡಲು ಮತ್ತು ವೈದ್ಯರ ವರ್ಗಾವಣೆಯನ್ನು ಸ್ಥಗಿತಗೊಳಿಸಲು ಮುಖ್ಯಮಂತ್ರಿ ಸಂಪುಟದಲ್ಲಿ ಸೂಚಿಸಿರುವುದಾಗಿ ಸಚಿವರು ಹೇಳುತ್ತಿದ್ದಾರೆ.

## ಅಗ್ನಿವೀರ್ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ರಾಯಚೂರು ಜಿಲ್ಲೆಯ ಯುವಕರಿಗೆ ಸುವರ್ಣಾವಕಾಶ




ನೈಜ್ಯ ದೆಸೆ ನ್ಯೂಸ್

**ರಾಯಚೂರು: ಭಾರತೀಯ ಸೇನೆಯಲ್ಲಿನ ಅಗ್ನಿವೀರ್ ಸೇರಿದಂತೆ ವಿವಿಧ ಹುದ್ದೆಗಳನ್ನು ಸೇರಲು ಆಸಕ್ತಿಯಿರುವ ರಾಯಚೂರು ಸೇ–ರಿದಂತೆ ಕೊಪ್ಪಳ, ಯಾದಗಿರಿ, ಕಲಬುರಗಿ, ಬಳ್ಳಾರಿ, ವಿಜಯನಗರ ಹಾಗೂ ಬೀದರ ಜಿಲ್ಲೆಗಳ ಯುವಕರಿಗೆ ಅರ್ಜಿ ಸಲ್ಲಿಸಲು ಏಪ್ರೀಲ್ 01 ರವರೆಗೆ ಅವಕಾಶ ಕಲ್ಪಿಸಲಾಗಿದೆ.**

ಆಸಕ್ತ ಯುವಕರು ಸೇನೆಯ ಅಧಿಕೃತ ವೆಬ್‌ಸೈಟ್ www.joinindianarmy.nic.in ಗೆ ಭೇಟಿ ನೀಡಿ ಅಲ್ಲಿ ಅಗ್ನಿಪಥ್ ಟ್ಯಾಬ್ ಕ್ಲಿಕ್ ಮಾಡಿ, ಆಧಾರ್ ಅಥವಾ 10ನೇ ತರಗತಿ ಸರ್ಟಿಫಿಕೇಟ್ ಬಳಸಿ ನೋಂದಣಿ ಮಾಡಿಕೊಳ್ಳಬಹುದಾಗಿದೆ. ಅರ್ಜಿ ಶುಲ್ಕ 250 ರೂ. ನಿಗದಿಪಡಿಸಲಾಗಿದ್ದು, ಅಗ್ನಿವೀರ್ ಜನರಲ್ ಡ್ಯೂಟಿ ಹುದ್ದೆಗೆ ಅರ್ಜಿ ಸಲ್ಲಿಸಲು 10ನೇ ತರಗತಿಯಲ್ಲಿ ಕನಿಷ್ಠ ಶೇ.45 ರಷ್ಟು ಅಂಕಗಳೊಂದಿಗೆ ಉತ್ತೀರ್ಣರಾಗಿರಬೇಕು. ಅಗ್ನಿವೀರ್ ಟೆಕ್ನಿಕಲ್‌ಗೆ ಅರ್ಜಿ ಸಲ್ಲಿಸಲು ಪಿಯುಸಿ ವಿಜ್ಞಾನ ವಿಭಾಗದಲ್ಲಿ ಉತ್ತೀರ್ಣ ಅಥವಾ 10ನೇ ತರಗತಿಯ ಜೊತೆಗೆ ಐಟಿಐ ಮುಗಿಸಿರಬೇಕು.

ಅಗ್ನಿವೀರ್ ಕ್ಲರ್ಕ್ ಹಾಗೂ ಸ್ಟೋರ್ ಕೀಪರ್ ಹುದ್ದೆಗಳಿಗೆ ಯಾವುದೇ ವಿಭಾಗದ ಪಿಯುಸಿಯಲ್ಲಿ ಕನಿಷ್ಠ ಶೇ.60 ಅಂಕಗಳನ್ನು ಪಡೆದಿರಬೇಕು. ಇಂಗ್ಲಿಷ್ ಮತ್ತು ಗಣಿತ ವಿಷಯ ಕಡ್ಡಾಯವಾಗಿರುತ್ತದೆ. ಅಗ್ನಿವೀರ್ ಟ್ರೇಡ್ಸ್‌ಮನ್ ಹುದ್ದೆಗೆ 8 ನೇ ಅಥವಾ 10ನೇ ತರಗತಿ ಉತ್ತೀರ್ಣರಾಗಿರಬೇಕು. ಎರಡು ಹಂತಗಳಲ್ಲಿ ಸಾಮರ್ಥ್ಯದ ಪರೀಕ್ಷೆ ನಡೆಯಲ್ಲಿದ್ದು ಮೊದಲಿಗೆ ಕಂಪ್ಯೂಟರ್ ಆಧಾರಿತ ಲಿಖಿತ ಪರೀಕ್ಷೆ ಇರುತ್ತದೆ. ಇದರಲ್ಲಿ ಉತ್ತೀರ್ಣರಾದವರಿಗೆ ಮುಂದಿನ ಹಂತಕ್ಕೆ ಅವಕಾಶವಿರುತ್ತದೆ. ಎರಡನೇ ಹಂತದಲ್ಲಿ ನೇಮಕಾತಿ ರ್‍ಯಾಲಿಯಲ್ಲಿ ದೈಹಿಕ ಪರೀಕ್ಷೆ ಇರುತ್ತದೆ ಎಂದು ಭಾರತೀಯ ಸೇನೆಯ ಬೆಂಗಳೂರು ಕೇಂದ್ರ ಕಚೇರಿಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಚೀಕಲಪರ್ವಿ ರುದ್ರಮುನೀಶ್ವರ ಮಠದಲ್ಲಿ ವಿರೂಪಾಕ್ಷ ಮಹಾಸ್ವಾಮಿಗಳ 12ನೇ ಪುಣ್ಯಸ್ಮರ

ನೈಜ್ಯ ದೆಸೆ ನ್ಯೂಸ್

**ಮಾನ್ವಿ: ತಾಲೂಕಿನ ಚೀಕಲಪರ್ವಿ ಗ್ರಾಮದ ಶ್ರೀ ರುದ್ರಮುನೀಶ್ವರ ಮಠದಲ್ಲಿ ಲಿಂ. ವಿರೂಪಾಕ್ಷ ಮಹಾಸ್ವಾಮಿಗಳವರ 12ನೇ ಪುಣ್ಯಸ್ಮರಣೋತ್ಸವ ಭಕ್ತಿಭಾವದಿಂದ ನೆರವೇರಿತು. ಈ ಸಂದರ್ಭದಲ್ಲಿ ಕತ್ರುಗದುಗೆಗೆ ಬೆಳಿಗ್ಗೆ ರುದ್ರಾಭಿಷೇಕ ಹಾಗೂ ವಿಶೇಷ ಹೂವಿನ ಅಲಂಕಾರ ಮಾಡಲಾಯಿತು.**



ಶ್ರೀಮಠದ ಆವರಣದಲ್ಲಿ ನೂತನ ಪೂಜ್ಯರ ಕಟ್ಟಡವನ್ನು ಹಾಲ್ವಿ ಚರಣಗಿರಿ ಸಂಸ್ಥಾನ ಮಠದ ಅಭಿನವ ಮಹಾಂತಸ್ವಾಮಿಗಳು ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿ ಆಶೀರ್ವಚನ ನೀಡಿದರು. ಗುರುವಿನ ಸೇವೆಯಲ್ಲಿ ನಮ್ಮನ್ನು ನಾವು ತೊಡಗಿಸಿಕೊಂಡಾಗ ಮಾತ್ರ ಜೀವನದಲ್ಲಿ ಉತ್ತಮ ಫಲಗಳನ್ನು ಪಡೆಯಲು ಸಾಧ್ಯವಾಗುತ್ತದೆ ಎಂದು ಹೇಳಿದರು. ಪುಣ್ಯಸ್ಮರಣೆ ಅಂಗವಾಗಿ ಭಕ್ತರಿಗೆ ಪ್ರಸಾದ ಸೇವೆ ನಡೆಯಿತು.

ಕಾರ್ಯಕ್ರಮದಲ್ಲಿ ಯದ್ದಲದೊಡ್ಡಿ ಸುವರ್ಣಗಿರಿ ಸಂಸ್ಥಾನ ಮಠದ ಮಹಾಲಿಂಗ ಮಹಾಸ್ವಾಮಿಗಳು, ಮುನವಳ್ಳಿ ಮಠದ ಮುರುಗೇಂದ್ರ ಮಹಾಸ್ವಾಮಿಗಳು, ಬಳಗನೂರು ಮರಿಶಿವಯೋಗಿಗಳ ಮಠದ ಸಿದ್ದಬಸವ ಮಹಾಸ್ವಾಮಿಗಳು, ಮೈಸೂರಿನ ನಿರಂಜನದೇವರು, ಅರಳಹಳ್ಳಿ ಮಠದ ಶರಣಬಸವ ದೇವರು ಸೇರಿದಂತೆ ಶ್ರೀಮಠದ ಭಕ್ತರು ಭಾಗವಹಿಸಿದ್ದರು.

## ನೀರಮಾನ್ವಿ ಗಣಿ ಅಕ್ರಮ ಪ್ರಕರಣ: ವಿರೋಧ ಪಕ್ಷದ ನಾಯಕರಿಗೆ ದೂರು

ನೈಜ್ಯ ದೆಸೆ ನ್ಯೂಸ್

**ಮಾನ್ವಿ: ತಾಲೂಕಿನ ನೀರಮಾನ್ವಿ ಗ್ರಾಮದಲ್ಲಿ ನಡೆದಿದೆ ಎನ್ನಲಾದ ಕೋಟ್ಯಂತರ ರೂಪಾಯಿ ಗಣಿ ದಂಡ ಅಕ್ರಮ ಹಾಗೂ ಸರ್ಕಾರಿ ಜಮೀನು ಒತ್ತುವರಿ ಪ್ರಕರಣಕ್ಕೆ ಸಂಬಂಧಿಸಿದಂತೆ ಸಮಾಜ ಸೇವಕ ಗುರುರಾಜ ನಾಗಲಾಪುರ ಅವರು ಬೆಂಗಳೂರಿನ ವಿಧಾನಸೌಧದಲ್ಲಿ ಕರ್ನಾಟಕ ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಅವರನ್ನು ಭೇಟಿ ಮಾಡಿ ಅಧಿಕೃತವಾಗಿ ದೂರು ಸಲ್ಲಿಸಿದರು.**

ಈ ವೇಳೆ ಅಕ್ರಮ ಗಣಿಗಾರಿಕೆ, ದಂಡ ಕಡಿತ ಮತ್ತು ಸರ್ಕಾರಿ ಜಮೀನು ಒತ್ತುವರಿ ಕುರಿತ ಸಂಪೂರ್ಣ ವಿವರಗಳನ್ನು ಮನವಿಯ ಮೂಲಕ ಅವರ ಗಮನಕ್ಕೆ ತಂದರು. ಉಪವಾಸ ಸತ್ಯಾಗ್ರಹಕ್ಕೂ ಬೆಲೆ ನೀಡದ ಅಧಿಕಾರಿಗಳ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ ಗುರುರಾಜ ನಾಗಲಾಪುರ, ಮಾನ್ವಿ ಪಟ್ಟಣದಲ್ಲಿ ಎರಡು ದಿನಗಳ ಕಾಲ ಉಪವಾಸ ಸತ್ಯಾಗ್ರಹ ನಡೆಸಿದ ಸಂದರ್ಭದಲ್ಲಿ ಅಧಿಕಾರಿಗಳು ಗಣಿಗಾರಿಕೆ ಸ್ಥಗಿತಗೊಳಿಸಿ ದಂಡ ವಸೂಲಿ ಮಾಡುವುದಾಗಿ ಲಿಖಿತ ಭರವಸೆ ನೀಡಿದ್ದರು. ಆದರೆ ಹಲವು ತಿಂಗಳು ಕಳೆದರೂ ಯಾವುದೇ ಕ್ರಮ ಕೈಗೊಂಡಿಲ್ಲ. ಜಿಲ್ಲಾಡಳಿತದ ಅಧಿಕಾರಿಗಳು ಅಕ್ರಮ ಕಂಪನಿಯೊಂದಿಗೆ ಶಾಮೀಲಾಗಿರುವುದು ಸ್ಪಷ್ಟವಾಗುತ್ತಿದೆ ಎಂದು ಆರೋಪಿಸಿದರು.



ಇನ್ನೂ ಐಎಎಸ್ ಅಧಿಕಾರಿ ಗಜಾನನ ಬಾಳೆ ಅವರ ತಂಡ ವಿಧಿಸಿದ್ದ 1.88 ಕೋಟಿ ದಂಡವನ್ನು ನಿಯಮಬಾಹಿರವಾಗಿ 1.06 ಕೋಟಿಗೆ ಇಳಿಸಿ ಸರ್ಕಾರಕ್ಕೆ 82 ಲಕ್ಷ ನಷ್ಟ ಉಂಟುಮಾಡಲಾಗಿದೆ. ಹಿರಿಯ ಭೂವಿಜ್ಞಾನಿ ಮುತ್ತಪ್ಪ ಹಾಗೂ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು. ಮಂಜೂರಾದ 5 ಎಕರೆ ಬದಲು 6 ಎಕರೆ 14 ಗುಂಟೆ ಸರ್ಕಾರಿ/ಅರಣ್ಯ ಭೂಮಿ ಒತ್ತುವರಿ ಮಾಡಿಕೊಂಡು ಯಾವುದೇ ಪರವಾನಗಿ ಇಲ್ಲದೆ ಅಕ್ರಮ ಒ–ಖಚಿಟಿಜ ಘಟಕ ನಡೆಸುತ್ತಿರುವುದನ್ನು ತಕ್ಷಣ ತಡೆಯಬೇಕು. ಈ ಕುರಿತು ಸದನದಲ್ಲಿ ಧ್ವನಿ ಎತ್ತಿ ತಪ್ಪಿತಸ್ಥ ಅಧಿಕಾರಿಗಳನ್ನು ಅಮಾನತುಗೊಳಿಸಿ ಉನ್ನತ ಮಟ್ಟದ ತನಿಖೆ ನಡೆಸುವಂತೆ ಮನವಿ ಸಲ್ಲಿಸಲಾಯಿತು. ಈ ವೇಳೆ ಮನವಿ ಸ್ವೀಕರಿಸಿದ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ಪ್ರಕರಣದ ಬಗ್ಗೆ ಸರ್ಕಾರದ ಗಮನ ಸೆಳೆದು ಸೂಕ್ತ ಕ್ರಮ ಕೈಗೊಳ್ಳುವಂತೆ ಹಾಗೂ ಪೀಡಿತ ಗ್ರಾಮಸ್ಥರಿಗೆ ನ್ಯಾಯ ಒದಗಿಸುವಂತೆ ಒತ್ತಾಯಿಸುವುದಾಗಿ ಭರವಸೆ ನೀಡಿದರು.

## ಸನ್ ರೈಸ್ ಪ್ಯಾರಾ ಮೆಡಿಕಲ್ ಕಾಲೇಜಿನಲ್ಲಿ ಲ್ಯಾಬ್ ಟೆಕ್ನಿಷಿಯನ್ ದಿನಾಚರಣೆ ಆಚರಣೆ

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ನಗರದ ಸನ್ ರೈಸ್ ಪ್ಯಾರಾ ಮೆಡಿಕಲ್ ಕಾಲೇಜಿನಲ್ಲಿ ಮಾರ್ಚ್ 13ರಂದು ಲ್ಯಾಬ್ ಟೆಕ್ನಿಷಿಯನ್ ದಿನವನ್ನು ವಿಜೃಂಭಣೆಯಿಂದ ಆಚರಿಸಲಾಯಿತು. ಈ ಸಂದರ್ಭದಲ್ಲಿ ಸರ್ಕಾರಿ ಆಸ್ಪತ್ರೆಯ ಲ್ಯಾಬ್ ಟೆಕ್ನಿಷಿಯನ್ ಗುರುರಾಜ್ ಹಾಗೂ ಕಾಲೇಜಿನ ಪ್ರಾಚಾರ್ಯರಾದ ಚಕ್ರವರ್ತಿ ಡಿ ಅವರು ಕೇಕ್ ಕತ್ತರಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.**



ಕಾರ್ಯಕ್ರಮದಲ್ಲಿ ಮಾತನಾಡಿದ ಗುರುರಾಜ್ ಅವರು, ಆರೋಗ್ಯ ಕ್ಷೇತ್ರದಲ್ಲಿ ಲ್ಯಾಬ್ ತಂತ್ರಜ್ಞರ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ತಿಳಿಸಿದರು. ರೋಗಗಳ ನಿಖರ ಪತ್ತೆಹಚ್ಚುವಿಕೆಯಲ್ಲಿ ಲ್ಯಾಬ್ ತಂತ್ರಜ್ಞರ ಪರಿಶ್ರಮ ಅತ್ಯಂತ ಮುಖ್ಯವಾಗಿದ್ದು, ವೈದ್ಯರು ಸರಿಯಾದ ಚಿಕಿತ್ಸೆ ನೀಡಲು ಲ್ಯಾಬ್ ವರದಿಗಳು ಪ್ರಮುಖ ಆಧಾರವಾಗುತ್ತವೆ ಎಂದು ಹೇಳಿದರು. ಆಸ್ಪತ್ರೆಗಳಲ್ಲಿ ನಡೆಯುವ ಬಹುತೇಕ ಚಿಕಿತ್ಸಾ ಪ್ರಕ್ರಿಯೆಗಳು ಲ್ಯಾಬ್ ಪರೀಕ್ಷೆಗಳ ಮೇಲೆ ಅವಲಂಬಿತವಾಗಿದ್ದು, ಲ್ಯಾಬ್ ತಂತ್ರಜ್ಞರು ಆರೋಗ್ಯ ಸೇವೆಯ ಅವಿಭಾಜ್ಯ ಅಂಗರಾಗಿದ್ದಾರೆ ಎಂದು ಅಭಿಪ್ರಾಯಪಟ್ಟರು.

ಪ್ರಾಚಾರ್ಯರಾದ ಚಕ್ರವರ್ತಿ ಡಿ ಮಾತನಾಡಿ, ಪ್ಯಾರಾ ಮೆಡಿಕಲ್ ಶಿಕ್ಷಣದಲ್ಲಿ ಲ್ಯಾಬ್ ತಂತ್ರಜ್ಞಾನ ವಿಭಾಗವು ವಿದ್ಯಾರ್ಥಿಗಳಿಗೆ ಉತ್ತಮ ಭವಿಷ್ಯವನ್ನು ನೀಡುವ ಕ್ಷೇತ್ರವಾಗಿದೆ ಎಂದು ಹೇಳಿದರು.

ವಿದ್ಯಾರ್ಥಿಗಳು ತಾಂತ್ರಿಕ ಜ್ಞಾನ ಹಾಗೂ ಪ್ರಾಯೋಗಿಕ ಕೌಶಲ್ಯಗಳನ್ನು ಬೆಳೆಸಿಕೊಂಡರೆ ದೇಶದ ವಿವಿಧ ಆಸ್ಪತ್ರೆಗಳು ಮತ್ತು ಸಂಶೋಧನಾ ಕೇಂದ್ರಗಳಲ್ಲಿ ಉತ್ತಮ ಅವಕಾಶಗಳನ್ನು ಪಡೆಯಬಹುದು ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಲ್ಯಾಬ್ ತಂತ್ರಜ್ಞರ ಜವಾಬ್ದಾರಿ, ಶಿಸ್ತು, ನಿಷ್ಠೆ ಹಾಗೂ ಸೇವಾ ಮನೋಭಾವದ ಅಗತ್ಯತೆಯ ಬಗ್ಗೆ ವಿವರಿಸಲಾಯಿತು. ಆರೋಗ್ಯ ಸೇವೆಯಲ್ಲಿ ತಂತ್ರಜ್ಞರ ಪಾತ್ರವನ್ನು ವಿದ್ಯಾರ್ಥಿಗಳು ಅರಿತುಕೊಳ್ಳುವಂತೆ ಮಾರ್ಗದರ್ಶನ ನೀಡಲಾಯಿತು. ಕಾರ್ಯಕ್ರಮದ ಅಂಗವಾಗಿ ಲ್ಯಾಬ್ ತಂತ್ರಜ್ಞಾನ ಕ್ಷೇತ್ರದ ಬೆಳವಣಿಗೆ, ಆಧುನಿಕ ವೈದ್ಯಕೀಯ ಪರೀಕ್ಷಾ ವಿಧಾನಗಳು ಹಾಗೂ ಆರೋಗ್ಯ ಸೇವೆಯಲ್ಲಿ ಅದರ ಮಹತ್ವದ ಕುರಿತು ಚರ್ಚೆ ನಡೆಯಿತು.

ವಿದ್ಯಾರ್ಥಿಗಳು ಉತ್ಸಾಹದಿಂದ ಕಾರ್ಯಕ್ರಮದಲ್ಲಿ ಭಾಗವಹಿಸಿ ದಿನದ ಮಹತ್ವವನ್ನು ತಿಳಿದುಕೊಂಡರು. ಈ ಸಂದರ್ಭದಲ್ಲಿ ಕಾಲೇಜಿನ ಉಪನ್ಯಾಸಕರು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದು ಕಾರ್ಯಕ್ರಮವನ್ನು ಯಶಸ್ವಿಯಾಗಿ ನೆರವೇರಿಸಿದರು. ಕಾರ್ಯಕ್ರಮದ ಅಂತ್ಯದಲ್ಲಿ ಎಲ್ಲರೂ ಲ್ಯಾಬ್ ತಂತ್ರಜ್ಞರ ಸೇವೆಯನ್ನು ಸ್ಮರಿಸಿ ಅವರಿಗೆ ಅಭಿನಂದನೆಗಳನ್ನು ಸಲ್ಲಿಸಿದರು.

## ಸಾಹಿತ್ಯ ಸಿಂಚನ

ಆರೋಗ್ಯದ

ಆರೋಗ್ಯವೇ ಅಮೂಲ್ಯ ಸಂಪತ್ತು,
ಜೀವನದ ನಿಜವಾದ ಆಭರಣ.
ಹಣ ಸಂಪತ್ತು ಎಲ್ಲವೂ ಸಿಗಬಹುದು,
ಆದರೆ ಆರೋಗ್ಯವೇ ಸರ್ವಸ್ವ ಧನ.

ಬೆಳಗಿನ ಸೂರ್ಯ ಕಿರಣ ಕಂಡು,
ವ್ಯಾಯಾಮದಿಂದ ದಿನ ಆರಂಭಿಸೋಣ.
ಶುದ್ಧ ಆಹಾರ, ಶುದ್ಧ ನೀರಿನಿಂದ,
ನಮ್ಮ ದೇಹವನ್ನು ಕಾಪಾಡೋಣ.

ಕೋಪ, ಚಿಂತೆ ದೂರವಿಟ್ಟು,
ಮನಸ್ಸು ಸದಾ ಹಸನಾಗಿರಲಿ.
ಹಾಸ್ಯ, ಸಂತೋಷ ಜೀವನದಲ್ಲಿ,
ಆರೋಗ್ಯದ ದಾರಿ ತೋರಲಿ.

ಸ್ವಚ್ಛತೆ ನಮ್ಮ ಮಂತ್ರವಾಗಲಿ,
ಪ್ರತಿ ದಿನ ಅದನ್ನು ಪಾಲಿಸೋಣ.
ಆರೋಗ್ಯವೇ ಜೀವನದ ಬಲವೆಂದು,
ಎಲ್ಲರೂ ಸೇರಿ ಅರಿಯೋಣ.

ರಮೇಶ

## ಹ್ಯೂಮನ್ ಪ್ಯಾಪಿಲೋಮ ವೈರಸ್ (ಹೆಚ್.ಪಿ.ವಿ) ತಡೆಗಟ್ಟಲು ಹೆಚ್.ಪಿ.ವಿ ಲಸಿಕೆಯನ್ನು ತಪ್ಪದೇ ಹಾಕಿಸಿಕೊಳ್ಳಿ

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಜಿಲ್ಲಾ ಆಡಳಿತ ಜಿಲ್ಲಾ ಪಂಚಾಯತ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರು ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಸರ್ಕಾರಿ ಪ್ರೌಢಶಾಲೆ ಜವಳಗೇರಾ ಇವರ ಸಂಯುಕ್ತ ಆಶ್ರಯದಲ್ಲಿ ಹೆಚ್. ಪಿ ವಿ ಲಸಿಕೆಯನ್ನು ಹಾಕಿಸಲು. 14 ವರ್ಷದ ಮಕ್ಕಳಿಗೆ ಸರ್ಕಾರಿ ಪ್ರೌಢಶಾಲೆ ಜವಳಗೇರಾದಲ್ಲಿ ಜಾಗೃತಿ ಮೂಡಿಸಲಾಯಿತು ನಂತರ ಮಾತನಾಡಿದ ವೈದ್ಯಾಧಿಕಾರಿಗಳಾದ ಡಾಕ್ಟರ ಪ್ರೀತಾ ಪಾಟೀಲ ಅವರು ಹೆಚ್.ಪಿ.ವಿ ಲಸಿಕೆಯಿಂದ ಕ್ಯಾನ್ಸರ್ ತಡೆಗಟ್ಟುತ್ತದೆ ಹೆಣ್ಣು ಮಕ್ಕಳು ಈ ನಾಡಿನ ಸುಭದ್ರತೆ ಭವಿಷ್ಯದ ಬುನಾದಿಯಾಗಿದಾರೆ.**

ಪ್ರಸ್ತುತ ಸದರಿ ಲಸಿಕೆಯನ್ನು 14 ವರ್ಷ ತುಂಬಿದ ಹಾಗೂ 15 ವರ್ಷದ ಒಳಗಿನ ಹೆಣ್ಣು ಮಕ್ಕಳಿಗೆ ಭಾರತ ಸರಕಾರದ ಮಾರ್ಗ ಸೂಚಿಗಳ ಅನುಸಾರ ಲಸಿಕೆಯನ್ನು ನೀಡಲಾಗುತ್ತದೆ. ಸದರಿ ಲಸಿಕೆಯನ್ನು ಜಿಲ್ಲೆಯ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರ ಸಮುದಾಯ



ಆರೋಗ್ಯ ಕೇಂದ್ರ ತಾಲೂಕ ಆಸ್ಪತ್ರೆಗಳಲ್ಲಿ ವೈದ್ಯರು ಮತ್ತು ತಜ್ಞ ವೈದ್ಯರ ಮೂಲಕ ಲಸಿಕೆಯನ್ನು ನೀಡಲಾಗುತ್ತದೆ ಎಂದರು. ನಂತರ ಮಾತನಾಡಿದ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಾಲಪ್ಪ ನಾಯಕ ಹೆಣ್ಣು ಮಕ್ಕಳ ಭವಿಷ್ಯವನ್ನು ಸುರಕ್ಷಿತಗೊಳಿಸುವುದರೊಂದಿಗೆ ಸುರಕ್ಷಿತ ಲಸಿಕೆ ಸುಂದರ ಭವಿಷ್ಯ ನಮ್ಮ ಹೆಣ್ಣು ಮಕ್ಕಳ ಆರೋಗ್ಯ ನಮ್ಮ ಆದ್ಯತೆ ಎಂಬ ಘೋಷ ವಾಕ್ಯದೊಂದಿಗೆ 14 ವರ್ಷದ ಎಲ್ಲಾ ಹೆಣ್ಣು ಮಕ್ಕಳಿಗೆ ಹೆಚ್ ಪಿ ವಿ ಲಸಿಕೆಯನ್ನು ಹಾಕುವುದರ ಮೂಲಕ ಗರ್ಭಕಂಠದ ಕ್ಯಾನ್ಸರ್ ಮುಕ್ತ ಸಮಾಜ ಪ್ರತಿಯೊಬ್ಬರಿಗೆ ತಲುಪುವ ನಿಟ್ಟಿನಲ್ಲಿ ಲಸಿಕೆಯನ್ನು ಪಡೆಯುವಂತೆ ಮನವಿಯನ್ನು ಮಾಡುತ್ತೇವೆ.

ಹೆಚ್ ಪಿ ವಿ ಲಸಿಕೆವು ಇದು ತುಂಬಾ ಪರಿಣಾಮಕಾರಿಯಾಗಿದೆ ಮತ್ತು ಗರ್ಭಕಂಠದ ಕ್ಯಾನ್ಸರ್ ಅನ್ನು ತಡೆಯುತ್ತದೆ. ಭಾರತದಲ್ಲಿ ಉಚಿತವಾಗಿ ಹೆಚ್. ಪಿ .ವಿ ಲಸಿಕೆಯನ್ನು ನೀಡಲಾಗುತ್ತದೆ ಈ ಲಸಿಕೆಯಿಂದ ಅಡ್ಡ ಪರಿಣಾಮವೂ ಇರುವುದಿಲ್ಲ ಹೆಚ್. ಪಿ.ವಿ ಲಸಿಕೆಯನ್ನು ಪಡೆದ ಮಕ್ಕಳಿಗೆ ಯೂ ವಿನ್ ತಂತ್ರಾಂಶಗಳಲ್ಲಿ ನೊಂದಣಿ ಮಾಡಿ ಪ್ರಮಾಣ ಪತ್ರ ನೀಡಲಾಗುವುದು ಅದಕ್ಕಾಗಿ ವಿದ್ಯಾರ್ಥಿನಿಯರು ಆಧಾರ್ ಕಾರ್ಡ್



ಮತ್ತು ಫೋನ್ ನಂಬರ್ ತೆಗೆದುಕೊಂಡು ಬರಲು ಮಾಹಿತಿ ಶಿಕ್ಷಣ ನೀಡಲಾಯಿತು

ನಂತರ ಮಾತನಾಡಿದ ಶಿಕ್ಷಕರಾದ ಅನ್ನಮ್ಮ ಅವರು ನಿಮ್ಮ ಉಜ್ವಲ್ ಭವಿಷ್ಯಕ್ಕಾಗಿ ಮಕ್ಕಳು ತಪ್ಪದೇ ಲಸಿಕೆಯನ್ನು ಕಡ್ಡಾಯವಾಗಿ ಪಡೆದು ಕೊಳ್ಳಿ ಎಂದು ಮಾಹಿತಿ ನೀಡಿದರು. ಈ ಸಂದರ್ಭದಲ್ಲಿ ಮುಖ್ಯೋಪಾಧ್ಯಾಯರು ಜಿ. ಎಸ್ ಪಾಟೀಲ್ ಶಿಕ್ಷಕರಾದ ಪ್ರೀಯಾ. ಅನ್ನಮ್ಮ. ನಂದಾದೀಪ . ವಿ ಎಸ್ . ಆರೋಗ್ಯ ನಿರೀಕ್ಷಣಾ ಅಧಿಕಾರಿಗಳಾದ ಮಹೇಶ .ಅಂಬಮ್ಮ. ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

## ಇಂದು ಶಾಸಕ ನಾಡಗೌಡರಿಂದ ಸೌಹಾರ್ದ ಇಫ್ತಾರ ಕೂಟ

ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಪವಿತ್ರ ರಮಜಾನ ಮಾಸದ ಅಂಗವಾಗಿ ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಗಮದ ಅಧ್ಯಕ್ಷ, ಮುದ್ದೇಬಿಹಾಳ ಮತಕ್ಷೇತ್ರ ಶಾಸಕರಾದ ಸಿ.ಎಸ್.ನಾಡಗೌಡ (ಅಪ್ಪಾಜಿ) ಇವರ ವತಿಯಿಂದ ಮುಸ್ಲಿಂ ಬಾಂಧವರಿಗಾಗಿ ಇಂದು (ಮಾ.14) ಶನಿವಾರ ಸೌಹಾರ್ದ ಇಫ್ತಾರ ಕೂಟವನ್ನು ಆಯೋಜಿಸಲಾಗಿದೆ.**



ಪಟ್ಟಣದ ಹಳೆ ತರಕಾರಿ ಮಾರುಕಟ್ಟೆ ಆವರಣದಲ್ಲಿ ಸಂಜೆ 5-30ಕ್ಕೆ ನಡೆಯಲಿರುವ ಈ ಸೌಹಾರ್ದ ಇಫ್ತಾರ ಕೂಟದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಶಾಸಕರ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

## ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಸಮಿತಿ ಸದಸ್ಯರಾಗಿ ಅರವಿಂದ ಕುಲಕರ್ಣಿ ನೇಮಕ



ನೈಜ್ಯ ದೆಸೆ ನ್ಯೂಸ್

**ರಾಯಚೂರು: ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಸಮಿತಿ ಸದಸ್ಯರಾಗಿ ರಾಯಚೂರವಾಣಿ ಪತ್ರಿಕೆ ವ್ಯವಸ್ಥಾಪಕ ಸಂಪಾದಕ ಶ್ರೀ ಅರವಿಂದ ಕುಲಕರ್ಣಿ ನೇಮಕವಾಗಿದ್ದಾರೆ. ಬೆಂಗಳೂರಿನ ಕೆಯುಡಬ್ಲ್ಯೂಜೆ ಕೇಂದ್ರ ಕಚೇರಿಯಲ್ಲಿ ಇಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶ್ರೀ ಶಿವಾನಂದ ತಗಡೂರು ಅವರು ಅರವಿಂದ ಕುಲಕರ್ಣಿ ಅವರಿಗೆ ನೇಮಕಾತಿ ಆದೇಶ ಪತ್ರ ನೀಡಿದರು.**

ಸಂಘದ ಎಲ್ಲಾ ಚಟುವಟಿಕೆಯಲ್ಲಿ ಸಕ್ರೀಯವಾಗಿ ಭಾಗವಹಿಸಿ ಸಂಘದ ಬೈಲಾ ನಿಯಮಗಳಿಗೆ ಬದ್ಧರಾಗಿ ಸಂಘದ ಹಿರಿಮೆ ಎತ್ತಿ ಹಿಡಿಯುವ ಮತ್ತು ಸಂಘಟನೆ ಮಾಡುವ ನಿಟ್ಟಿನಲ್ಲಿ ಕೆಲಸ ಮಾಡುವಂತೆ ನೇಮಕಾತಿ ಆದೇಶದಲ್ಲಿ ತಿಳಿಸಿದ್ದಾರೆ. ಈ ಹಿಂದೆ ಅರವಿಂದ ಕುಲಕರ್ಣಿ ಅವರು ರಾಯಚೂರು ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷರಾಗಿ, ಪ್ರಧಾನ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸಿದ್ದು ಈಗ ರಾಜ್ಯ ಸಮಿತಿ ಸದಸ್ಯರಾಗಿ ನೇಮಕಗೊಂಡಿದ್ದಾರೆ. ಈ ಸಂದರ್ಭದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಯಚೂರು ಜಿಲ್ಲಾಧ್ಯಕ್ಷ ಆರ್.ಗುರುನಾಥ, ರಾಜ್ಯ ಸಮಿತಿ ಸದಸ್ಯ ಬಸವರಾಜ ನಾಗಡದಿನ್ನಿ, ಹಿರಿಯ ಪತ್ರಕರ್ತರಾದ ಕೆ.ಸತ್ಯನಾರಾಯಣ, ಜಿ.ವೀರಾರೆಡ್ಡಿ ಉಪಸ್ಥಿತರಿದ್ದರು.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

## ರಾಯಚೂರು ಜಿಲ್ಲೆಯಲ್ಲಿ ಅಡುಗೆ ಅನಿಲದ ಕೊರತೆ ಇಲ್ಲ: ಜಿಲ್ಲಾಧಿಕಾರಿ ನಿತೀಶ್ ಕೆ.

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಪಶ್ಚಿಮ ಏಷ್ಯಾ ರಾಷ್ಟ್ರಗಳಲ್ಲಿ ನಡೆಯುತ್ತಿರುವ ಯುದ್ಧದಿಂದಾಗಿ ದೇಶದಲ್ಲಿ ಅಡುಗೆ ಅನಿಲ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಬಹುದು ಎಂಬ ಸಾಮಾಜಿಕ ಜಾಲ ತಾಣಗಳಲ್ಲಿ ಹರಿದಾಡುತ್ತಿರುವ ವಂದತಿಗಳಿಗೆ ಜಿಲ್ಲೆಯ ಸಾರ್ವಜನಿಕರು ಕಿವಿಗೊಡಬಾರದು. ಜಿಲ್ಲೆಯಲ್ಲಿ ಅಡುಗೆ ಅನಿಲದ ದಾಸ್ತಾನು ಸಾಕಷ್ಟು ಪ್ರಮಾಣದಲ್ಲಿದ್ದು, ಗ್ರಾಹಕರು ಯಾವುದೇ ಆತಂಕಪಡುವ ಅಗತ್ಯವಿಲ್ಲ ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ತಿಳಿಸಿದ್ದಾರೆ.**

ದೇಶಾದ್ಯಂತ ಎಲ್‌ಪಿಜಿ ಉತ್ಪಾದನೆ ಮತ್ತು ಬಾಟಲಿಂಗ್ ಎರಡೂ ಹೆಚ್ಚಿರುವುದರಿಂದ ದೇಶಿಯ ಎಲ್‌ಪಿಜಿಯ ಕೊರತೆ ಇರುವುದಿಲ್ಲ. ಜಿಲ್ಲೆಯಲ್ಲಿ




ಗೃಹ ಬಳಕೆ ಅಡುಗೆ ಅನಿಲ ಸಿಲಿಂಡರ್‌ಗಳು ಸಾಕಷ್ಟು ಪ್ರಮಾಣದಲ್ಲಿ ಸದ್ಯ ದಾಸ್ತಾನು ಲಭ್ಯವಿರುವುದರಿಂದ ಗ್ರಾಹಕರು ಯಾರು ಗಾಬರಿಗೊಳ್ಳಬಾರದೆಂದು ಹಾಗೂ ಹೆಚ್ಚುವರಿಯಾಗಿ ದಾಸ್ತಾನು ಮಾಡಿಕೊಳ್ಳಬಾರದೆಂದು ತಿಳಿಯಪಡಿಸಿದೆ. ಹೆಚ್ಚಿನ ಗ್ರಾಹಕರು ಮುಂಚಿತವಾಗಿ ಬುಕ್ಕಿಂಗ್ ಮಾಡುತ್ತಿರುವುದರಿಂದ ಐವಿಆರ್‌ಎಸ್/ಮಿಸಡ್ ಕಾಲ್ ಮಾಡುವ ವ್ಯವಸ್ಥೆಯಲ್ಲಿ ಹೆಚ್ಚಿನ ಸಂಚಾರ ದಟ್ಟಣೆ ಉಂಟಾಗಿ ಸದರಿ ಸಿಸ್ಟಮ್ ಗಳು ಕಾರ್ಯನಿರ್ವಹಿಸುತ್ತಿಲ್ಲವಾದ್ದರಿಂದ ಪರ್ಯಾಯವಾಗಿ IOCL, BPCL & HPCL ಎಲ್‌ಪಿಜಿ ತೈಲ ಕಂಪನಿಗಳು ಗ್ರಾಹಕರಿಗೆ 6 ಬುಕಿಂಗ್ ವಿಧಾನಗಳು ಲಭ್ಯವಿವೆ – IVRS, Missed Call, WhatsApp, Mobile Application, OMC Portal ಪೋರ್ಟಲ್‌ಗಳು ಮತ್ತು ಪಾವತಿ ಆಪ್ಲಿಕೇಶನಗಳು (Paytm/ Phone Pay) ನಂತಹ ಇತ್ಯಾದಿ ಗ್ರಾಹಕರು. ತಮ್ಮ ಅನುಕೂಲಕ್ಕೆ ಅನುಗುಣವಾಗಿ ಈ ವ್ಯವಸ್ಥೆಯನ್ನು ಬಳಸಲು ಸೂಚಿಸಲಾಗಿದೆ. ಬೇಡಿಕೆಯ ಭಾಗವನ್ನು ನಿರ್ವಹಿಸಲು, ಪ್ರತಿ ಗ್ರಾಹಕರಿಗೆ ಕೊನೆಯ ಮರುಪೂರಣದ ದಿನಾಂಕದಿಂದ 25 ದಿನಗಳವರೆಗೆ ಇಂಟರ್-ಬುಕಿಂಗ್ ಅವಧಿಯನ್ನು ನಿಗಧಿಪಡಿಸಲಾಗಿದೆ.


ಜಿಲ್ಲೆಯಲ್ಲಿ ಎಲ್‌ಪಿಜಿ ಸಿಲಿಂಡರಗಳ ಕೊರತೆ ಇರುವುದಿಲ್ಲವಾದ್ದರಿಂದ ಸಾರ್ವಜನಿಕರು ಭಯಪಡುವ ಅಗತ್ಯವಿಲ್ಲ ಮತ್ತು ಸಾಮಾಜಿಕ ಜಾಲ ತಾಣಗಳಲ್ಲಿ ಹರಿದಾಡುತ್ತಿರುವ ಸುಳ್ಳು ವದಂತಿಗಳಿಗೆ ಸಾರ್ವಜನಿಕರು ಕಿವಿಗೊಡಬಾರದು. ಒಂದು ವೇಳೆ ಯಾವುದೇ ಸಮಸ್ಯೆ ಕಂಡುಬಂದಲ್ಲಿ ತಾಲ್ಲೂಕು ಮಟ್ಟದಲ್ಲಿ ಆಯಾ ತಾಲ್ಲೂಕಿನ ತಹಶಿಲ್ದಾರರಿಗೆ ಹಾಗೂ ಜಿಲ್ಲಾ ಮಟ್ಟದಲ್ಲಿ ಉಪನಿರ್ದೇಶಕರ ಕಚೇರಿಗೆ ಕಚೇರಿ ಸಮಯದಲ್ಲಿ ದೂರವಾಣಿ ಸಂಖ್ಯೆ: 08532-226383ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಾರ್ಚ್ 17ರಂದು ವಿವಿಧ ಜಯಂತಿಗಳ ಪೂರ್ವಭಾವಿ ಸಭೆ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜಿಲ್ಲೆಯಲ್ಲಿ ಜಿಲ್ಲಾಡಳಿತದ ವತಿಯಿಂದ ಮಾರ್ಚ್ 23ರಂದು ದೇವರ ದಾಸಿಮಯ್ಯ ಜಯಂತಿ ಹಾಗೂ ಮಾರ್ಚ್ 31ರಂದು ಭಗವಾನ್ ಮಹಾವೀರ್ ಜಯಂತಿ ನಡೆಯಲಿವೆ.**





ಈ ಜಯಂತಿಗಳ ಅಂಗವಾಗಿ ಮಾರ್ಚ್ 17ರ ಬೆಳಿಗ್ಗೆ 11ಗಂಟೆಗೆ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆ ಹಮ್ಮಿಕೊಳ್ಳಲಾಗಿದ್ದು, ವಿವಿಧ ಸಮಾಜದ ಮುಖಂಡರು, ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿ ಸೂಕ್ತ ಸಲಹೆ ಸೂಚನೆ ನೀಡಿ ಸಭೆಯನ್ನು ಯಶಸ್ವಿಗೊಳಿಸಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉತ್ತರಾದೇವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕುಡಿಯವ ನೀರಿನ ಸಮಸ್ಯೆ ಇತ್ಯರ್ಥಕ್ಕೆ ಕಂಟ್ರೋಲ್ ರೂಮ್ ಪ್ರಾರಂಭ: ಜಿಲ್ಲಾಧಿಕಾರಿ ನಿತೀಶ್ ಕೆ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜಿಲ್ಲೆಯಲ್ಲಿ ಮುಂಬರುವ ಬೇಸಿಗೆ ದಿನಗಳಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ತುರ್ತಾಗಿ ಕುಡಿಯವ ನೀರಿನ ಸಮಸ್ಯೆಯ ಕುರಿತು ಸಾರ್ವಜನಿಕರು ಮಾಹಿತಿ ನೀಡಲು ಜಿಲ್ಲಾಧಿಕಾರಿಗಳ ಕಾರ್ಯಾಲಯ, ಜಿಲ್ಲಾ ಪಂಚಾಯತ್, ಜಿಲ್ಲೆಯ ಎಲ್ಲಾ ತಾಲೂಕು ತಹಶೀಲ್ದಾರ್ ಕಚೇರಿಗಳಲ್ಲಿ ಹಾಗೂ ತಾಲೂಕು ಪಂಚಾಯತ್ ಕಚೇರಿಗಳಲ್ಲಿ ಕಂಟ್ರೋಲ್ ರೂಮ್ ಪ್ರಾರಂಭಿಸಿದ್ದು, ಸಾರ್ವಜನಿಕರು ಈ ಸೌಲಭ್ಯವನ್ನು ಬಳಿಸಿಕೊಳ್ಳಬೇಕೆಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಕೋರಲಾಗಿದೆ.**

ಜಿಲ್ಲಾ ವಿಪತ್ತು ನಿರ್ವಹಣಾ ಕೇಂದ್ರದ ದೂರವಾಣಿ ಸಂಖ್ಯೆ: 08532-226383 ಅಥವಾ 1077 (ಜಿಲ್ಲಾಧಿಕಾರಿಗಳ ಕಾರ್ಯಾಲಯ ರಾಯಚೂರು), ಜಿಲ್ಲಾ ಪಂಚಾಯತ್ ರಾಯಚೂರು: 8971940129, ತಾಲೂಕು ಪಂಚಾಯತ್ ರಾಯಚೂರು: 9483203052, ತಾಲೂಕು ಪಂಚಾಯತ್ ಮಾನವಿ 9972236690, 7022326090, 8105368046, ತಾಲೂಕು ಪಂಚಾಯತ್



ಸಿಂಧನೂರು: 96113 66894, ತಾಲೂಕು ಪಂಚಾಯತ್ ಲಿಂಗಸೂಗೂರು: 9900577921, 9945226423, 9008727961, ತಾಲೂಕು ಪಂಚಾಯತ್ ದೇವದುರ್ಗ: 08531-260029, 9972353743, ತಾಲೂಕು ಪಂಚಾಯತ್ ಸಿರವಾರ್: 7022278013, 8748838861, 9632544321, ತಾಲೂಕು ಪಂಚಾಯತ್ ಮಸ್ಕಿ: 08537-295522, 08537-270122, ತಹಶೀಲ್ದಾರ ಕಾರ್ಯಾಲಯ ರಾಯಚೂರು: 08532-200772, ತಹಶೀಲ್ದಾರ ಕಾರ್ಯಾಲಯ ಮಾನವಿ: 08538-220239, ತಹಶೀಲ್ದಾರ ಕಾರ್ಯಾಲಯ ಸಿಂಧನೂರು: 9035640154, ತಹಶೀಲ್ದಾರ ಕಾರ್ಯಾಲಯ ಲಿಂಗಸೂಗೂರು: 08537-275247, ತಹಶೀಲ್ದಾರ ಕಾರ್ಯಾಲಯ ದೇವದುರ್ಗ: 08531-200117, ತಹಶೀಲ್ದಾರ ಕಾರ್ಯಾಲಯ ಸಿರವಾರ್: 08538-200082, ತಹಶೀಲ್ದಾರ ಕಾರ್ಯಾಲಯ ಮಸ್ಕಿ: 08537-295504 ಈ ಸಹಾಯವಾಣಿಗಳಿಗೆ ಕರೆ ಮಾಡಿ ಕುಡಿಯುವ ನೀರಿನ ಸಮಸ್ಯೆ ಕುರಿತು ಮಾಹಿತಿ ನೀಡುವಂತೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಡುಗೆ ಅನಿಲ ದರ ಏರಿಕೆ ಖಂಡಿಸಿ ಕಾಂಗ್ರೆಸ್ ಘಟಕಗಳ ಪ್ರತಿಭಟನೆ

ನೈಜ್ಯ ದೆಸೆ ನ್ಯೂಸ್

**ಮುದ್ದೇಬಿಹಾಳ: ಅಡುಗೆ ಅನಿಲದ ದರ ಏರಿಕೆಯನ್ನು ಖಂಡಿಸಿ ಹಾಗೂ ಕೇಂದ್ರ ಸರ್ಕಾರದ ಬೆಲೆ ಏರಿಕೆ ನೀತಿಗೆ ವಿರೋಧ ವ್ಯಕ್ತಪಡಿಸಿ ಪಟ್ಟಣದ ಬಸವೇಶ್ವರ ವೃತ್ತದಲ್ಲಿ ಎನ್‌ಎಸ್‌ಯುಐ, ಯುವ ಕಾಂಗ್ರೆಸ್ ಹಾಗೂ ಮಹಿಳಾ ಕಾಂಗ್ರೆಸ್ ಘಟಕಗಳ ನೇತೃತ್ವದಲ್ಲಿ ಗುರುವಾರ ಪ್ರತಿಭಟನೆ ನಡೆಯಿತು. ಪ್ರತಿಭಟನಾಕಾರರು ಕೇಂದ್ರದ ಬಿಜೆಪಿ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಾ, ದಿನಬಳಕೆಯ ವಸ್ತುಗಳ ನಿರಂತರ ಬೆಲೆ ಏರಿಕೆಯಿಂದ ಸಾಮಾನ್ಯ ಜನರು ಸಂಕಷ್ಟ ಅನುಭವಿಸುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.**

ಅಡುಗೆ ಅನಿಲ ಸೇರಿದಂತೆ ಅಗತ್ಯ ವಸ್ತುಗಳ ಬೆಲೆ ಹೆಚ್ಚುತ್ತಿರುವುದರಿಂದ ಮಧ್ಯಮ ವರ್ಗ ಹಾಗೂ ಬಡ ಕುಟುಂಬಗಳಿಗೆ ಜೀವನ ಸಾಗಿಸುವುದು ಕಷ್ಟಕರವಾಗಿದೆ ಎಂದು ಹೇಳಿದರು. ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ



ಕರ್ನಾಟಕ ರಾಜ್ಯ ಎನ್‌ಎಸ್‌ಯುಐ ಪ್ರಧಾನ ಕಾರ್ಯದರ್ಶಿ ಸದ್ದಾಂ ಕುಂಟೋಜಿ, ಕೇಂದ್ರ ಸರ್ಕಾರದ ಆರ್ಥಿಕ ನೀತಿಗಳು ಬಡವರ ಪರವಾಗಿಲ್ಲ. ಸರ್ಕಾರ ಬಂಡವಾಳಶಾಹಿಗಳ ಪರವಾಗಿ ಕೆಲಸ ಮಾಡುತ್ತಿದ್ದು, ಗೃಹಬಳಕೆಯ ಗ್ಯಾಸ್ ದರ ಹೆಚ್ಚಳದಿಂದ ಜನಸಾಮಾನ್ಯರ ಬದುಕಿಗೆ ಹೆಚ್ಚುವರಿ ಹೊರೆ ಆಗುತ್ತಿದೆ ಎಂದು ಆರೋಪಿಸಿದರು. ಮುದ್ದೇಬಿಹಾಳ ಮಹಿಳಾ ಕಾಂಗ್ರೆಸ್ ಬ್ಲಾಕ್ ಅಧ್ಯಕ್ಷೆ ಅಕ್ಷತಾ ಚಲವಾದಿ ಮಾತನಾಡಿ, ಬೆಲೆ ಏರಿಕೆಯಿಂದ ಗೃಹಿಣಿಯರು ಮನೆ ಖರ್ಚು ನಿರ್ವಹಿಸುವುದು ಕಷ್ಟವಾಗಿದೆ.

ಸರ್ಕಾರ ತಕ್ಷಣ ಕ್ರಮ ಕೈಗೊಳ್ಳದಿದ್ದರೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಸಿದರು. ಈ ವೇಳೆ ವಿಜಯಪುರ ಜಿಲ್ಲಾ ಯುವ ಕಾಂಗ್ರೆಸ್ ಉಪಾಧ್ಯಕ್ಷ ಬಸವರಾಜ ಬಂಜೆತ್ರಿ, ಮಹಿಳಾ ಕಾಂಗ್ರೆಸ್ ನಾಯಕಿ ಸುಜಾತಾ ಶಿಂಧೆ, ಮುದ್ದೇಬಿಹಾಳ ಬ್ಲಾಕ್ ಯುವ ಕಾಂಗ್ರೆಸ್ ಅಧ್ಯಕ್ಷ ಸಚಿನ್ ಪಾಟೀಲ್, ಮಹಾಬುಬಿ ಬಾಗವಾನ ಸೇರಿದಂತೆ ಹಲವು ಮುಖಂಡರು ಮಾತನಾಡಿ ಕೇಂದ್ರ ಸರ್ಕಾರದ ನೀತಿಗಳನ್ನು ಟೀಕಿಸಿದರು. ಪ್ರತಿಭಟನೆಯಲ್ಲಿ ಜಿಲ್ಲಾ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಹಾಗೂ ಸರ್ಕಾರಿ ಆಸ್ಪತ್ರೆಯ ನಾಮನಿರ್ದೇಶಿತ ಸದಸ್ಯ ರಫೀಕ್ ಶಿರೋಳ, ಸಮೀರ್ ದ್ರಾಕ್ಷಿ, ರಾಮಣ್ಣಾ ನಾಯಕಮಕ್ಕಳ, ಅಬೂಬಕರ್ ಹಡಗಲಿ, ಕೈಯ್ಯೂಮ್ ಮೊಮಿನ್, ಬಸವರಾಜ ಚಲವಾದಿ, ಚಂದ್ರು ಚಲವಾದಿ, ಯಮನಪ್ಪ, ಅಭಿ ಕಲಾಲ, ಅಬ್ದುಲ್ ಸಲಾಂ ಮುಲ್ಲಾ, ಬಂದು ಮ್ಯಾಗೇರಿ, ಮಂಜುನಾಥ ಮುರಾಳ, ಪ್ರದೀಪ್ ರಾಠೋಡ್, ಇನಾಯತ್ ಮೊಮಿನ್, ರಾಜು ಪಾಟೀಲ್, ಶೇಖರ್ ಬಿರಾದಾರ ಸೇರಿದಂತೆ ಹಲವರು ಭಾಗವಹಿಸಿದ್ದರು. ಅದೇ ರೀತಿ ಮಹಿಳಾ ಕಾಂಗ್ರೆಸ್ ನಾಯಕಿಂಯರಾದ ಶೋಭಾ ಶೇಳ್ಳಗಿ, ಕಮಲಾ ಬಂಜೆತ್ರಿ, ನೀಲಮ್ಮ ಚಲವಾದಿ, ಮಮ್ತಾಜ್ ಮುಲ್ಲಾ, ಶಿವಲೀಲಾ ಬಸರಕೋಡ, ಹೀನಾ ಮೂಲಿಮನಿ, ಹಸೀನಾ ನಿಡಗುಂದಿ, ಹಫೀಜಾ ಜಮಾದಾರ, ನೀಲಮ್ಮ ಮಹಾಲಿಂಗಪುರ, ದೇವಮ್ಮ ಹುಣಕುಂಟಿ, ಮಾಹಬೂಬಿ ನಾಯ್ಕೋಡಿ, ಬಸಮ್ಮಾ ಯರಗಲ್ ಸೇರಿದಂತೆ ನೂರಾರು ಕಾರ್ಯಕರ್ತರು ಉಪಸ್ಥಿತರಿದ್ದರು.

## ನೇಮಕಾತಿ ಪ್ರಕಟಣೆ

HLL Lifecare HLL ಲೈಫ್‌ಕೇರ್ ನೇಮಕಾತಿ 2026: 2 ಸೆಕ್ಯುರಿಟಿ ಇನ್ಸ್‌ಪೆಕ್ಟರ್ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಊಐಐ ಲೈಫ್‌ಕೇರ್ ಲಿಮಿಟೆಡ್ ಮಾರ್ಚ್ 2026 ರ ಊಐಐ ಲೈಫ್‌ಕೇರ್ ಅಧಿಕೃತ ಅಧಿಸೂಚನೆಯ ಮೂಲಕ ಸೆಕ್ಯುರಿಟಿ ಇನ್ಸ್‌ಪೆಕ್ಟರ್ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ತಿರುವನಂತಪುರಂ – ಕೇರಳ ಸರ್ಕಾರದಲ್ಲಿ ವೃತ್ತಿಜೀವನವನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 17–ಮಾರ್ಚ್–2026 ರಂದು ವಾಕ್–ಇನ್–ಇಂಟರ್ವ್ಯೂಗೆ ಹಾಜರಾಗಬಹುದು.ಅಧಿಕೃತ ವೆಬ್‌ಸೈಟ್: lifecarehll.com

## ಮಾರ್ಚ್ 17ರಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ನೇರ ಸಂದರ್ಶನ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಇಲ್ಲಿನ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ಮಾರ್ಚ್ 17ರ ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 02 ಗಂಟೆವರೆಗೆ ನೇರ ಸಂದರ್ಶನ ಆಯೋಜಿಸಲಾಗಿದೆ. ಈ ವೇಳೆ ಎರಡು ಕಂಪನಿಗಳು ಭಾಗವಹಿಸಿ ತಮ್ಮಲ್ಲಿ ಖಾಲಿ ಇರುವ ಹುದ್ದೆಗಳನ್ನು ನೇರವಾಗಿ ಭರ್ತಿ ಮಾಡಿಕೊಳ್ಳಲಿದ್ದಾರೆ.**





ಅರ್ಹತೆಗಳು: ಎಸ್.ಎಸ್.ಎಲ್.ಸಿ, ಪಿ.ಯು.ಸಿ ಹಾಗೂ ಎಲ್ಲಾ ಪದವೀಧರ ಆಸಕ್ತ 18 ರಿಂದ 30 ವರ್ಷಗಳ ವರೆಗಿನ ಅಭ್ಯರ್ಥಿಗಳು ಈ ಮೇಳದಲ್ಲಿ ಭಾಗವಹಿಸಬಹುದಾಗಿದೆ. ವಿದ್ಯಾರ್ಹತೆಯ ಅಂಕಪಟ್ಟಿಗಳ ಜೆರಾಕ್ಸ್ ಪ್ರತಿಗಳು ಮತ್ತು ತಮ್ಮ ಬಯೋಡೆಟಾ, ಆಧಾರ್ ಕಾರ್ಡ್ ಪ್ರತಿ, ಭಾವಚಿತ್ರಗನ್ನು ಸಲ್ಲಿಸಬೇಕು. ನೇರ ಸಂದರ್ಶನದಲ್ಲಿ ಭಾಗವಹಿಸಲು ಯಾವುದೇ ಶುಲ್ಕವಿರುವುದಿಲ್ಲ, ಬದಲಾಗಿ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗಬಹುದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಬಾಲಾಜಿ ಕಾಂಪ್ಲೆಕ್ಸ್, ನೆಲ ಮಹಡಿ, ಗೂಡ್ ಶೆಡ್ ರಸ್ತೆ, ಸ್ಟೇಷನ್ ಏರಿಯಾ, ರಾಯಚೂರು ಹಾಗೂ ದೂರವಾಣಿ ಸಂಖ್ಯೆ 08532–231684, 9916931616, 9008211750ಗೆ ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ನವೀನ್ ಕುಮಾರ್ ಸಂಗೇಪಾಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಳೆ (ಮಾ.15) ಡಾ.ಪ್ರಭುಗೌಡ ಲಿಂಗದಳ್ಳಿ ಬಳಗದಿಂದ ಇಫ್ತಾರ ಕೂಟ

ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಪವಿತ್ರ ರಮಜಾನ ಮಾಸದ ಅಂಗವಾಗಿ ಕೆಪಿಸಿಸಿ ರಾಜ್ಯ ಪ್ರಧಾನ ಕಾರ್ಯದರ್ಶಿ ಡಾ.ಪ್ರಭುಗೌಡ ಪಾಟೀಲ (ಲಿಂಗದಳ್ಳಿ) ಅಭಿಮಾನಿಗಳ ಬಳಗದ ವತಿಯಿಂದ ಮುಸ್ಲಿಂ ಬಾಂಧವರಿಗಾಗಿ ತಾಳಿಕೋಟಿ ತಾಲೂಕಿನ ದೇವರ ಹಿಪ್ಪರಗಿ ಮತಕ್ಷೇತ್ರದ ಪೀರಾಪೂರ ಗ್ರಾಮದಲ್ಲಿ ನಾಳೆ (ಮಾ.15) ರವಿವಾರ ಸೌಹಾರ್ದ ಇಫ್ತಾರ ಕೂಟವನ್ನು ಆಯೋಜಿಸಲಾಗಿದೆ.**



ಪೀರಾಪೂರ ಗ್ರಾಮದ ಎಸ್.ಬಿ.ಬಿರಾದಾರ ಸರಕಾರಿ ಪ್ರೌಢಶಾಲೆ ಹತ್ತಿರ ಸಂಜೆ 6–15 ಘಂಟೆಗೆ ನಡೆಯಲಿರುವ ಈ ಸೌಹಾರ್ದ ಇಫ್ತಾರ ಕೂಟದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಡಾ.ಪ್ರಭುಗೌಡ ಲಿಂಗದಳ್ಳಿ ಅಭಿಮಾನಿ ಗೆಳೆಯರ ಬಳಗದ ಪ್ರಕಟಣೆ ತಿಳಿಸಿದೆ.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಹ್ಯಾಂಡ್‌ಹೆಲ್ಡ್ ಎಕ್ಸ್–ರೇ ಮೆಷಿನ್ ಬಳಕೆಯ ತರಬೇತಿ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಕ್ಷಯರೋಗ ತಡೆಗೆ ಕಫ ಪರೀಕ್ಷೆ ಹಾಗೂ ಆಸ್ಪತ್ರೆಗಳಲ್ಲಿ ಎಕ್ಸ್–ರೆ ಮೇಷಿನ್ ಮೂಲಕ ಪರೀಕ್ಷೆ ಮಾಡುವ ಜೊತೆ ಜೊತೆಗೆ ದೂರದ ಸ್ಥಳಗಳು ಅಥವಾ ಕೊಳಚೆ ಪ್ರದೇಶದ ಜನತೆಯು ಪರೀಕ್ಷೆಗೆ ಬರಲು ಅನಾನೂಕೂಲತೆಯನ್ನು ತಡೆಯಲು ದುರ್ಗಮ ಪ್ರದೇಶಗಳಲ್ಲಿ ಸಮುದಾಯದೊಂದಿಗೆ ಸ್ಥಳದಲ್ಲಿಯೇ ವಿಕಿರಣ ಚಿತ್ರಣ (ಎಕ್ಸ್–ರೇ) ಪ್ರತಿಯನ್ನು ಒದಗಿಸುವ ಮೂಲಕ ಕ್ಷಯರೋಗ (ಟಿಬಿ) ಪತ್ತೆಯಲ್ಲಿ ಕ್ರಾಂತಿಯನ್ನುಂಟು ಮಾಡುವ ಹ್ಯಾಂಡ್‌ಹೆಲ್ಡ್ ಸಾಧನದ ಬಳಕೆಯನ್ನು ಪರಿಣಾಮಕಾ–ರಿಯಾಗಿಸಲು ಯಾವುದೇ ಮಾಹಿತಿಯ ಕೊರತೆಯಾಗದಂತೆ ತರಬೇತಿ ಪಡೆಯಿರಿ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ ಸುರೇಂದ್ರ ಬಾಬು ತಿಳಿಸಿದರು.**



ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಜಿಲ್ಲಾ ಕ್ಷಯರೋಗ ನಿರ್ಮೂಲನಾ ಕಾರ್ಯಕ್ರಮದಡಿ ಜಿಲ್ಲೆಯ ರೇಡಿಯಾಲಜಿ ಇಮೇಜಿಂಗ್ ಅಧಿಕಾರಿ, ಎಸ್‌ಟಿಎಸ್ ಹಾಗೂ ಎಸ್‌ಟಿಎಲ್‌ಎಸ್ ರವ–ರಿಗೆ ಹಮ್ಮಿಕೊಂಡ ಹ್ಯಾಂಡ್‌ಹೆಲ್ಡ್ ಎಕ್ಸ್–ರೇ ಮೆಷಿನ್ ಬಳಕೆಯ ತರಬೇತಿ ಶಿಬಿರದಲ್ಲಿ ಮಾತನಾಡುತ್ತಾ, ಜಿಲ್ಲೆಯ ಜನತೆಯ ಅನುಕೂಲಕ್ಕಾಗಿ ಎಲ್ಲ ತಾಲೂಕುಗಳಲ್ಲಿ ಜಿಲ್ಲೆಯ ಜನತೆಯು ಪರೀಕ್ಷೆಗಾಗಿಯೇ ಆಸ್ಪತ್ರೆಗಾಗಿ ಬರುವ ಸಮಯ, ಸಾರಿಗೆ ವೆಚ್ಚವನ್ನು ಉಳಿಸಿ ಸಮುದಾಯದ ಹತ್ತಿರವೇ ಹೋಗಿ ಶಂಕೀತರನ್ನು ಪರೀಕ್ಷೆ ಮಾಡಲು ಅತ್ಯುಪಯುಕ್ತವಾಗುವ ಉಪಕರಣವಾಗಿದ್ದು, ತ್ವರಿತ ರೋಗ ಪತ್ತೆಗೆ ಸಹಕಾರಿಯಾಗಿರುವ ಹ್ಯಾಂಡ್‌ಹೆಲ್ಡ್ ಎಕ್ಸ್–ರೇ ಮೆಷಿನ್ ಸದ್ಬಳಕೆಯಾಗಿಸಿ ಎಂದು ತಿಳಿಸಿದರು.

ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ ಮಹಮ್ಮದ್ ಶಾಕೀರ್ ಮಾತನಾಡಿ, ಸದರಿ ಮೆಷಿನ್ ಮೂಲಕ ಪರೀಕ್ಷೆ ಕೈಗೊಂಡ ನಂತರ ಸ್ಥಳದಲ್ಲಿಯೇ ವರದಿಯನ್ನು ನೀಡಲಾಗುವ ವ್ಯವಸ್ಥೆಯಿದ್ದು, ಕ್ಷಯರೋಗದ ಶಂಕಿತ ವರದಿಗಳು ಕಂಡು ಬಂದಲ್ಲಿ ಅಂತವ–ರಿಗೆ ಒಂದು ಬಾರಿ ಕಫ ಪರೀಕ್ಷೆ ಮಾಡಿಸಿ ಖಚಿತಪಡಿಸಿಕೊಂಡು ವೈದ್ಯರ ಸಲಹೆಯಂತೆ ಚಿಕಿತ್ಸೆ ಆರಂಭಿಸಲಾಗುವುದು ಎಂದರು. ಅನುಕೂಲತೆಗಳು: ಗ್ರಾಮೀಣ ಪ್ರದೇಶದ ಹಳ್ಳಿಗಳು, ಕೊಳೆಗೇರಿಗಳು ಅಥವಾ ಸಂಚಾರಿ ಆರೋಗ್ಯ ಚಿಕಿತ್ಸಾಲಯಗಳಿಗೆ ಸುಲಭವಾಗಿ ಸಾಗಿಸಬಹುದು, ಅನ್ಯ ಕಾಯಿಲೆಯಿಂದ ಬಳಲುವ ವ್ಯಕ್ತಿಗಳಿಗೆ ಅವರ ಬಳಿಯೆ ತೆರಳಿ ಪ್ರಕರಣ ಪತ್ತೆ ಹಚ್ಚಲು ಸಹಕಾರಿಯಾಗುವುದು.

ಈ ಸಂದರ್ಭದಲ್ಲಿ ಜಿಲಾ ಅರ್‌ಸಿಹೆಚ್ ಅಧಿಕಾರಿ ಡಾ ನಂದಿತಾ ಎಮ್ ಎನ್, ಜಿಲ್ಲಾ ಸರ್ವೆಕ್ಷಣಾಧಿಕಾರಿ ಡಾ ಗಣೇಶ್ ಕೆ, ಡಿಪಿಡಿಓ ಡಾ ಚಂದ್ರಶೇಖರ ಸ್ವಾಮಿ, ಎನ್‌ಪೋರ್ಸಮೆಂಟ್ ಅಧಿಕಾರಿ ಡಾ ಶಿವಕುಮಾರ ನಾರಾ ಹಾಗೂ ಜಿಲ್ಲಾ ಕಾರ್ಯಕ್ರಮ ಸಂಯೋಜಕ ಅಮರೇಶ ಕುಮಾರ್ ಸೇರಿದಂತೆ ಕ್ಷಯರೋಗ ವಿಭಾಗದ ಸಿಬ್ಬಂದಿಯವರು ಉಪಸ್ಥಿತರಿದ್ದರು.

# ಕರವೇ ಕನ್ನಡ ಸೇನೆ ವತಿಯಿಂದ ಕುಡಿಯುವ ನೀರಿನ ಅರವಟಿಗೆ ಉದ್ಘಾಟನೆ



ನೈಜ್ಯ ದೆಸೆ ನ್ಯೂಸ್

**ಲಿಂಗಸಗೂರು: ಕರವೇ ಕನ್ನಡ ಸೇನೆ ತಾಲ್ಲೂಕು ಘಟಕದ ವತಿಯಿಂದ ಪಟ್ಟಣದ ಪೊಲೀಸ್ ಠಾಣೆ ಮುಂಭಾಗದ ಸುಕೋ ಬ್ಯಾಂಕ್ ಬಳಿ ಬೇರೆಬೇರೆ ಗ್ರಾಮಗಳಿಂದ ವ್ಯಾಪಾರ ವಹಿವಾಟಿಗಾಗಿ ಸಾವಿರಾರು ಸಾರ್ವಜನಿಕರು ಓಡಾಡುತ್ತಿದ್ದು ಬಿಸಿಲಿನ ತಾಪ ಹೆಚ್ಚಾಗಿದ್ದ–ರಿಂದ ನೀರಿನ ದಾಹ ತಣಿಸಲು ಕುಡಿಯುವ ನೀರಿನ ಅರವಟಿಗೆ ಪ್ರಾರಂಭಿಸಿದ್ದೇನೆಂದು ಕರವೇ ಕನ್ನಡ ಸೇನೆಯ ತಾಲೂಕ ಅಧ್ಯಕ್ಷ ಹನುಮಂತಪ್ಪ ಗುಳ್ಳೆದಗುಡ್ಡ ಹೇಳಿದರು.**

ಅವರಿಂದು ನೀರಿನ ಅರವಟಿಗೆ ಉದ್ಘಾಟಿಸಿ ನಂತರ ಮಾತನಾಡಿದ ಅವರು ಈ ವರ್ಷ ಈಗಾಗಲೆ ತಾಪಮಾನ ಹೆಚ್ಚಾಗಿದೆ. ಪಟ್ಟಣಕ್ಕೆ ವ್ಯಾಪಾರ ವಹಿವಾಟಿಗಾಗಿ ಬರುವ ಸಾವಿರಾರು ಗ್ರಾಮೀಣ ಭಾಗದ ರೈತರು, ಕೂಲಿ ಕಾರ್ಮಿಕರು ಹಾಗೂ ಸಾರ್ವಜನಿಕರು ವಿವಿಧ ಕೆಲಸಗಳು ಮತ್ತು ಅಗತ್ಯ ವಸ್ತುಗಳ ಖರೀದಿಗಾಗಿ ಪ್ರತಿದಿನ ಪಟ್ಟಣಕ್ಕೆ ಆಗಮಿಸುತ್ತಾರೆ. ಬೇಸಿಗೆಯ ತೀವ್ರ ಬಿಸಿಲಿನ ತಾಪದಿಂದ ಜನರು ತತ್ತರಿ ಸುತ್ತಿದ್ದು, ದಾಹವಾಗುವ ಸಂದರ್ಭದಲ್ಲಿ ಕುಡಿಯುವ ನೀರನ್ನು ಪಡೆಯುವುದು ಕಷ್ಟಕರವಾಗುತ್ತಿದೆ ಎಂದು ತಿಳಿಸಿದರು.

ಜನರು ಹಣ ಕೊಟ್ಟು ನೀರು ಖರೀದಿಸಿ ಕುಡಿಯಬೇಕಾದ ಪರಿಸ್ಥಿತಿ ಇದೆ ಎಂದರು. ಈ ಹಿನ್ನೆಲೆಯಲ್ಲಿ ಸಾರ್ವಜನಿಕರಿಗೆ ದಾಹ ನೀಗಿಸಿಕೊಳ್ಳಲು ಉಚಿತವಾಗಿ ಕುಡಿಯುವ ನೀರು ದೊರೆಯುವಂತೆ ಮಾಡಲು ಕರವೇ ಕನ್ನಡ ಸೇನೆ ಸಂಘಟನೆ ವತಿಯಿಂದ ಕುಡಿಯುವ ನೀರಿನ ಅರವಟಿಗೆ ಸ್ಥಾಪಿಸಲಾಗಿದೆ. ಪುರಸಭೆ ಮುಖ್ಯಧಿಕಾರಿ ನಟರಾಜ್ ರವರು ನೀರಿನ ಅರವಟಿಗೆಗೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಬಸವರಾಜ್ ಕುಣೆಕೆಲ್ಲೂರ್, ಕಾರ್ಯದರ್ಶಿ ಬಸವರಾಜ್ ಚೀಲಕರಾಗಿ, ಅಮರೇಶ್ ಚೀಲಕರಾಗಿ, ಕಾರ್ಯದರ್ಶಿ ಭೀಮಣ್ಣ ಆನೆಹೊಸೂರ್ , ವಿಜಯ ಮೇಟಿ ತಾಲೂಕ

# ಮುದಗಲ್ ಸಂತೆ ಬಜಾರ್ ಹರಾಜು ಪ್ರಕ್ರಿಯೆ ರದ್ದತಿಗೆ ಒತ್ತಾಯ

ನೈಜ್ಯ ದೆಸೆ ನ್ಯೂಸ್

**ಲಿಂಗಸಗೂರು: ಮುದಗಲ್ ಪಟ್ಟಣದ ಸಂತೆ ಬಜಾರ್ ಹರಾಜು ಪ್ರಕ್ರಿಯೆ ಯನ್ನು ರದ್ದು ಮಾಡಬೇಕು ಎಂದು ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಜಿಲ್ಲಾ ಘಟಕದಿಂದ ಸಹಾಯಕ ಆಯುಕ್ತರ ಕಚೇರಿ ಸಿಬ್ಬಂದಿಗೆ ಮನವಿ ಸಲ್ಲಿಸಿ ಒತ್ತಾಯಿಸಿದರು.**



ಮುದಗಲ್ ಪಟ್ಟಣದ ಪುರಸಭೆಯವರು ಸಂತೆ ಮೈದಾನಕ್ಕೆ ಮೂಲ ಸೌಕರ್ಯಗಳನ್ನು ಕಲ್ಪಿಸುವ ವರೆಗೆ ಹರಾಜು ಪ್ರಕ್ರಿಯೆ ನಡೆಸ ಬಾರದು, ಈಗಾಗಲೇ ತಾಲೂಕಿನ ರೈತರು ಲಾಭಕ್ಕಿಂತ ಹೆಚ್ಚು ನಷ್ಟವನ್ನೇ ಅನುಭವಿಸುತ್ತಿದ್ದು, ಈ ನಡುವೆ ಮುದಗಲ್ ಪುರಸಭೆ ವ್ಯಾಪ್ತಿಯಲ್ಲಿ ರೈತರು ಬೆಳೆಯುವ ತರಕಾರಿ ಹಾಗೂ ಹಣ್ಣು, ಹೂ ಹಾಗೂ ದನ ಕುರಿಗಳ ನ್ನು ಮಾರಾಟ ಹಾಗೂ ಖರೀದಿ ಮಾಡಲು ಬಂದರೆ ಅತಿ ಹೆಚ್ಚು ತೆರಿಗೆ ವಸೂಲಿ ಮಾಡುತ್ತಿದ್ದಾರೆಂದು ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಕಾರ್ಯಕರ್ತರು ಆರೋಪಿಸಿದರು.

10 ಕೆ.ಜಿ. ಟೋಮಾಟೊ ಪುಟ್ಟಿಗೆ 25 ರಿಂದ 30 ರೂ. ಬೆಲೆಯಾ ದರೆ ಅದರಲ್ಲಿ 10–15 ರೂ.ಗಳಷ್ಟು ತೆರಿಗೆ ವಸೂಲಿ ಮಾಡುತ್ತಿದ್ದಾರೆ. ಈ ರೀತಿ ಹಗಲು ದರೋಡೆ ಮಾಡಿದರೆ ರೈತನು ಎಲ್ಲಾ ಖರ್ಚುಗಳನ್ನು ತೆಗೆದು ಲಾಭಗಳಿಸುವುದು ದೂರದ ಮಾತಾಗಿದೆ. ಮುದಗಲ್ ಪಟ್ಟಣದಲ್ಲಿರುವ ಸಂತೆ ಬಜಾರಗೆ ಸುಮಾರು ವರ್ಷಗಳಿಂದ ಯಾವುದೇ ಸೌಲಭ್ಯಗಳು ಇಲ್ಲ. ಅದರಲ್ಲಿಯೂ ವಿಶೇಷವಾಗಿ ಶುದ್ಧ ಕುಡಿಯುವ ನೀರು, ನೆರಳು ಶೌಚಾಲಯ ಇಲ್ಲದೇ ಖರೀದಾರರು ಹಾಗೂ ಮಾರಾಟಗಾರರು ತುಂಬಾ ತೊಂದರೆ ಅನುಭವಿಸುತ್ತಿದ್ದಾರೆ.

ಹಾಗಾಗಿ ಈ ವರ್ಷ ನಡೆಯುವ ಪರಾಜು ಪ್ರಕ್ರಿಯೆಯನ್ನು ರದ್ದುಗೊಳಿಸಿ ಸಂತೆ ಬಜಾರಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಿ, ರೈತರು ಬೆಳೆದ ಬೆಳೆಗೆ ವೈಜ್ಞಾನಿಕ ಬೆಲೆ ನಿಗದಿಪಡಿಸಿ ನಂತರ ಹರಾಜು ಪ್ರಕ್ರಿಯೆಯನ್ನು ಮಾಡಬೇಕು ಒಂದು ವೇಳೆ ಹರಾಜು ಪ್ರಕ್ರಿಯೆ ಯನ್ನು ನಡೆಸಿದರೆ ಹರಾಜು ಮಾಡುವ ದಿನದಂದು ಮುದಗಲ್ ಪುರಸಭೆ ಕಾರ್ಯಾಲಯಕ್ಕೆ ಬೀಗ ಜಡೆದು ಪ್ರತಿಭಟನೆ ಮಾಡಬೇಕಾಗುತ್ತದೆ ಎಂದು ಎಚ್ಚರಿಸಿದರು. ಈ ಸಂದರ್ಭದಲ್ಲಿ ಹಸಿರು ಸೇನೆಯ ಜಿಲ್ಲಾಧ್ಯಕ್ಷ ಶಿವಪುತ್ರಗೌಡ, ಕಾರ್ಯಾಧ್ಯಕ್ಷ ಆನಂದ ಕುಂಬಾರ, ಲಕ್ಷ್ಮಣ ಮುಕ್ಕಣ್ಣನವರ, ಬಸವರಾಜ ಭಜಂತ್ರಿ ಸೇರಿದಂತೆ ಇತರರು ಇದ್ದರು.

# ಜನಗಣತಿ ಕಾರ್ಯದಿಂದ ಬಡ್ತಿ ಮುಖ್ಯ ಶಿಕ್ಷಕರಿಗೆ ವಿನಾಯತಿ ನೀಡಲು ಒತ್ತಾಯ



ನೈಜ್ಯ ದೆಸೆ ನ್ಯೂಸ್

**ಲಿಂಗಸಗೂರು: ತಾಲೂಕಿನ ಬಡ್ತಿ ಹೊಂದಿದ ಮುಖ್ಯ ಶಿಕ್ಷಕರಿಗೆ ಜನಗಣತಿ ಕಾರ್ಯದಿಂದ ವಿನಾಯತಿ ನೀಡಬೇಕೆಂದು ಒತ್ತಾಯಿಸಿ ಹಿರಿಯ ಮತ್ತು ಪದವೀಧರೇತರ ಪ್ರಾಥಮಿಕ ಶಾಲಾ ಮುಖ್ಯೋಪಾಧ್ಯಾಯರ ಸಂಘದ ಪದಾಧಿಕಾರಿಗಳು ಬಿಇಒ ಸುಜಾತಾ ಹನೂರು ಅವರಿಗೆ ಮನವಿ ಸಲ್ಲಿಸಿದರು.**

6 ರಿಂದ 8 ನೇ ತರಗತಿಗಳ ಎಸ್‌ಎ–2 ಪರೀಕ್ಷೆ ಪ್ರಶ್ನೆ ಪತ್ರಿಕೆಗಳನ್ನು ಸಿಆರ್‌ಪಿ ಮುಖಾಂತರ ಶಾಲಾ ಮುಖ್ಯಶಿಕ್ಷಕ–ರಿಗೆ ತಲುಪಿಸಬೇಕು ಅಥವಾ ಮೊಬೈಲ್‌ಗೆ ಕಳುಹಿಸಬೇಕು. ಮುಖ್ಯ ಶಿಕ್ಷಕರಿಗೆ ಗಣಕಯಂತ್ರ ತರಬೇತಿ ನೀಡಬೇಕು. ಪ್ರತಿ ಶಾಲೆಗೆ ಇಂಟರ್‌ನೆಟ್ ಸಹಿತ ಒಂದು ಗಣಕ ಯಂತ್ರಪೂರೈಸಬೇಕು. ಚೆಕ್ಕರ್ ಮೇಕರ್ ಕ್ಯಾಶ್ ಬುಕ್ ನಿರ್ವಹಣೆ ಮಾಡುವ ಕುರಿತು ಏಕರೂಪದ ತರಬೇತಿ ನೀಡಬೇಕು ಹಾಗೂ ಇತರೆ ಬೇಡಿಕೆಗಳನ್ನು ಈಡೇರಿಸಬೇಕೆಂದು ಒತ್ತಾಯಿಸಿದರು.

ಈವೇಳೆಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಹಾಜಿಬಾಬು ಕಲ್ಯಾಣಿ, ಮುಖ್ಯೋಪಾಧ್ಯಾಯರ ಸಂಘದ ಗೌರವಾಧ್ಯಕ್ಷ ನಾಗೇಶ, ಅಧ್ಯಕ್ಷ ಅಮರಪ್ಪ ಸಾಲಿ, ಶಿವಶಂಕರ ಪಾಟೀಲ್, ಹುಲಗಪ್ಪ, ಮಾರುತಿ, ಚಂದ್ರಶೇಖರ, ಸುಭಾಷ್, ಫಕ್ರುದ್ದೀನ್ ಸೇರಿದಂತೆ ಇತರರು ಇದ್ದರು.

# ಸಿಂಧನೂರು ನಗರಸಭೆಯಲ್ಲಿ ವಿಶ್ವ ಮಹಿಳಾ ದಿನಾಚರಣೆ ಅಂಗವಾಗಿ “ನಾರಿಯರಿಂದ ಸ್ವಚ್ಛತೆಗೆ ಮುನ್ನುಡಿ” ಅಭಿಯಾನಕ್ಕೆ ಚಾಲನೆ

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ವಿಶ್ವ ಮಹಿಳಾ ದಿನಾಚರಣೆ ಅಂಗವಾಗಿ ಸಿಂಧನೂರು ನಗರಸಭೆ ಕಾರ್ಯಾಲಯದ ಸಭಾಂಗಣದಲ್ಲಿ ಅರ್ಥಪೂರ್ಣ ಹಾಗೂ ಪ್ರೇರಣಾದಾಯಕ ಕಾರ್ಯಕ್ರಮವನ್ನು ಆಯೋಜಿಸಲಾಯಿತು. ಮಹಿಳೆಯರ ಪಾತ್ರ, ಗೌರವ ಮತ್ತು ಸಮಾಜ ನಿರ್ಮಾಣದಲ್ಲಿ ಅವರ ಕೊಡುಗೆಯನ್ನು ಸ್ಮರಿಸುವ ಉದ್ದೇಶದಿಂದ “ನಾರಿಯರಿಂದ ಸ್ವಚ್ಛತೆಗೆ ಮುನ್ನುಡಿ” ಎಂಬ ವಿಶೇಷ ಅಭಿಯಾನವನ್ನು ದಿನಾಂಕ 08–03–2026 ರಿಂದ 14–03–2026 ರವರೆಗೆ ಆಚರಿಸಲಾಗುತ್ತಿದೆ.**






ಈ ಕಾರ್ಯಕ್ರಮದ ಮುಖ್ಯ ಉದ್ದೇಶ ನಗರದಲ್ಲಿ ಸ್ವಚ್ಛತೆ ಕುರಿತು ಜಾಗೃತಿ ಮೂಡಿಸುವುದು, ಮಹಿಳೆಯರನ್ನು ಸಾಮಾಜಿ–ಕ ಕಾರ್ಯಗಳಲ್ಲಿ ಹೆಚ್ಚು ಸಕ್ರಿಯವಾಗಿ ಭಾಗವಹಿಸಲು ಪ್ರೋತ್ಸಾಹಿಸುವುದು ಮತ್ತು ಪೌರಕರ್ಮಿಕ ಮಹಿಳೆಯರ ಸೇವೆಯನ್ನು ಗೌರವಿಸುವುದಾಗಿದೆ. ನಗರವನ್ನು ಸ್ವಚ್ಛವಾಗಿಟ್ಟುಕೊಳ್ಳುವಲ್ಲಿ ಪೌರಕರ್ಮಿಕರ ಪಾತ್ರ ಮಹತ್ವದ್ದಾಗಿದ್ದು, ಅವರ ಶ್ರಮ ಮತ್ತು ಸೇವೆಯನ್ನು ಗುರುತಿಸಿ ಗೌರವಿಸುವುದು ಸಮಾಜದ ಕರ್ತವ್ಯವೆಂದು ಕಾರ್ಯಕ್ರಮದಲ್ಲಿ ಅಭಿಪ್ರಾಯ ವ್ಯಕ್ತಪಡಿಸಲಾಯಿತು. ಕಾರ್ಯಕ್ರಮದ ಸಂದರ್ಭದಲ್ಲಿ ಮಾತನಾಡಿದ ಸಮುದಾಯ ಸಂಚಾಲಕಿ ಹಾಗೂ ಪೌರಕರ್ಮಿಕೆ ಸವಿತಾ ಕುಮಾರಿ ಅವರು ಮಹಿಳೆಯರ ಮಹತ್ವವನ್ನು ತುಂಬಾ ಮನಮುಟ್ಟುವ ಹಾಗೂ ಭಾವನಾತ್ಮಕ ಶೈಲಿಯಲ್ಲಿ ವಿವ–ರಿಸಿದರು. ಮಹಿಳೆಯರು ಕೇವಲ ಮನೆಯ ಗಡಿಗಳಲ್ಲೇ ಸೀಮಿತವಾಗಿರುವವರು ಅಲ್ಲ, ಸಮಾಜದ ನಿರ್ಮಾಣದಲ್ಲಿ ಪ್ರಮುಖ ಶಕ್ತಿ ಎಂದು ಅವರು ಹೇಳಿದರು.

ಅವರು ತಮ್ಮ ಭಾಷಣದಲ್ಲಿ, “ಮಹಿಳೆ ಎನ್ನುವುದು ಕೇವಲ ಒಂದು ಪದವಲ್ಲ, ಅದು ಶಕ್ತಿ, ಸಹನೆ ಮತ್ತು ತ್ಯಾಗದ ಸಂಕೇತ. ತಾಯಿ, ಸಹೋದರಿ, ಪತ್ನಿ, ಶಿಕ್ಷಕಿ, ವೈದ್ಯೆ ಅಥ–’ವಾ ಕಾರ್ಮಿಕೆಯಾಗಲಿ?ಯಾವ ಪಾತ್ರದಲ್ಲಿದ್ದರೂ ಮಹಿಳೆ ಸಮಾಜದ ಬೆನ್ನೆಲುಬಾಗಿ ನಿಂತಿರುತ್ತಾರೆ. ಪೌರಕರ್ಮಿಕ ಮಹಿಳೆಯರು ಪ್ರತಿದಿನ ಬೆಳಗ್ಗೆಯಿಂದಲೇ ನಗರವನ್ನು ಸ್ವಚ್ಛವಾಗಿಡಲು ತಮ್ಮ ಶ್ರಮವನ್ನು ಅರ್ಪಿಸುತ್ತಿದ್ದಾರೆ. ಅವರ ಸೇವೆ ಕಾಣಿಸದಿದ್ದರೂ ಅದು ಸಮಾಜದ ಆರೋಗ್ಯ ಮತ್ತು ಅಭಿವೃದ್ಧಿಗೆ ಅತ್ಯಂತ ಮುಖ್ಯವಾದದ್ದು,” ಎಂದು ಹೇಳಿದರು. ಮಹಿಳೆಯರಿಗೆ ಸಮಾಜದಲ್ಲಿ ಸಮಾನ ಗೌರವ, ಅವಕಾಶ ಮತ್ತು ಬೆಂಬಲ ದೊರೆಯಬೇಕು ಎಂದು ಅವರು ಅಭಿಪ್ರಾಯಪಟ್ಟರು. ಮಹಿಳೆಯರನ್ನು ಗೌರವಿಸುವುದು ಕೇವಲ ಒಂದು ದಿನದ ಆಚರಣೆ ಆಗದೆ, ಪ್ರತಿದಿನದ ಬದುಕಿನ ಭಾಗವಾಗಬೇಕು ಎಂದು ಅವರು ತಿಳಿಸಿದರು. ಅವರ ಮನದಾಳದ ಮಾತುಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ಎಲ್ಲರ ಮನಸ್ಸನ್ನು ಸ್ಪರ್ಶಿಸಿತು. ಕಾರ್ಯಕ್ರಮದ ಅಂಗವಾಗಿ ನಗರಸಭೆಯ ಮಹಿಳಾ ಪೌರಕರ್ಮಿಕರು ಹಾಗೂ ಪೌರಕರ್ಮಿಕರ ಮಕ್ಕಳನ್ನು ಸನ್ಮಾನಿಸಿ ಗೌರವಿಸಲಾಯಿತು. ಈ ಮೂಲಕ ಅವರ ಸೇವೆ, ಶ್ರಮ ಮತ್ತು ಸಾಧನೆಯನ್ನು ಗುರುತಿಸಿ ಪ್ರೋತ್ಸಾಹಿಸಲಾಯಿತು.

ಕಾರ್ಯಕ್ರಮದಲ್ಲಿ ಭಾಗವಹಿಸಿದ ಎಲ್ಲರೂ ಮಹಿಳೆಯರ ಶ್ರಮ, ತ್ಯಾಗ ಮತ್ತು ಸಮಾಜಕ್ಕೆ ನೀಡುತ್ತಿರುವ ಕೊಡುಗೆಯನ್ನು ಸ್ಮರಿಸಿ ಅವರನ್ನು ಗೌರವಿಸುವ ಸಂಕಲ್ಪ ವ್ಯಕ್ತಪಡಿಸಿದರು. ಈ ಕಾರ್ಯಕ್ರಮವು ಮಹಿಳೆಯರ ಗೌರವವನ್ನು ಹೆಚ್ಚಿಸುವ ಜೊತೆಗೆ ಸ್ವಚ್ಛತೆ ಬಗ್ಗೆ ಜಾಗೃತಿ ಮೂಡಿಸುವಲ್ಲಿ ಮಹತ್ವದ ಹೆಜ್ಜೆಯಾಗಿ ಪರಿಣಮಿಸಿತು. ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದವರು: ಮಾನ್ಯ ಪೌರಾಯುಕ್ತರು ಪಾಂಡುರಂಗ ಇಟಗಿ ಕಚೇರಿ ವ್ಯವಸ್ಥಾಪಕರು ಶ್ರೀಮತಿ ರೇಖಾ ಅಕೌಂಟೆಂಟ್ ಸುಪರಿಂಟೆಂಡೆಂಟ್ ಅಬ್ದುಲ್ ಸಹಾಯಕ ಕಾರ್ಯಪಾಲಕ ಅಭಿಯಂತರ ಮಹದೇವ್ ಕಟ್ಟೆ ಸಹಾಯಕ ಅಭಿಯಂತರ ಪ್ರವೀಣ್ ಸಾಗರ್ ಪರಿಸರ ಅಭಿಯಂತರ ಚೇತನ್ ನಾಯ್ಕ್ ಹಿರಿಯ ಆರೋಗ್ಯ ನಿರೀಕ್ಷಕರು ಕಿಶನ್ ರಾವ್, ಹನುಮಂತ ಯಾದವ ಕಿರಿಯ ಆರೋಗ್ಯ ನಿರೀಕ್ಷಕರು ಲಕ್ಷ್ಮೀಪತಿ, ಲಿಂಗರಾಜ್ ನಗರಸಭೆ ಸೂಪರ್ವೈಸರ್‌ಗಳು ಮೌನೇಶ್ ಕವಿತಾಳ್, ಜಗದೀಶ್, ಸಿದ್ದು ಸಮುದಾಯ ಸಂಚಾಲಕರು ಹಾಗೂ ಪೌರಕರ್ಮಿಕರು ಉಪಸ್ಥಿತರಿದ್ದರು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### BPT

ಬಿಪಿಟಿ (Bachelor of Physiotherapy - BPT) ಒಂದು 4.5 ವರ್ಷಗಳ (4 ವರ್ಷ ಓದು + 6 ತಿಂಗಳ ಇಂಟರ್ನ್‌ಶಿಪ್) ಪೂರ್ಣಾವಧಿ ಪದವಿ ಕೋರ್ಸ್ ಆಗಿದ್ದು, ಸ್ನಾಯು, ನರ ಮತ್ತು ಮೂಳೆಗಳ ಸಮಸ್ಯೆಗಳಿಗೆ ಔಷಧಿ ರಹಿತ ಚಿಕಿತ್ಸೆ (physiotherapy) ನೀಡುವುದನ್ನು ಕಲಿಸುತ್ತದೆ. ಇದು ಪಿಯುಸಿ (10+2) ನಲ್ಲಿ ವಿಜ್ಞಾನ (Physics, Chemistry, Biology) ವಿಷಯಗಳಲ್ಲಿ 50% ಅಂಕಗಳೊಂದಿಗೆ ಉತ್ತೀರ್ಣರಾದವರಿಗೆ ಸೂಕ್ತವಾಗಿದೆ. 2026 ರಿಂದ ಕರ್ನಾಟಕದಲ್ಲಿ ಓಇಇಖಿ ಕಡ್ಡಾಯವಾಗಿದೆ. ಬಿಪಿಟಿ (BPT) ಕೋರ್ಸ್ ವಿವರಗಳು (Kannada): ಕೋರ್ಸ್ ಹೆಸರು: ಬ್ಯಾಚುಲರ್ ಆಫ್ ಫಿಸಿಯೋಥ–'ರಪಿ (BPT) ಅವಧಿ: 4.5 ವರ್ಷಗಳು (4 ವರ್ಷಗಳು + 6 ತಿಂಗಳ ಕಡ್ಡಾಯ ಇಂಟರ್ನ್‌ಶಿಪ್). ಅರ್ಹತೆ: 10+2 ಅಥವಾ ತತ್ಸಮಾನ ಪರೀಕ್ಷೆಯಲ್ಲಿ ವಿಜ್ಞಾನ ವಿಷಯಗಳಲ್ಲಿ (PCB) ಕನಿಷ್ಠ 50% ಅಂಕಗಳು. ಪ್ರವೇಶಾತಿ (Admission): 2026–27ನೇ ಸಾಲಿನಿಂದ ಕರ್ನಾಟಕದಲ್ಲಿ NEET ಕಡ್ಡಾಯ. ಕಲಿಕಾ ವಿಷಯಗಳು (Syllabus): ಅನಾಟಮಿ, ಫಿಸಿಯಾಲಜಿ, ಬಯೋಮೆಕಾನಿಕ್ಸ್, ಬಯೋಕೆಮಿಸ್ಟ್ರಿ, ಎಕ್ಸರ್ಸೈಸ್ ಥೆರಪಿ, ಎಲೆಕ್ಟ್ರೋಥ–'ರಪಿ, ಮತ್ತು ಕ್ಲಿನಿಕಲ್ ಸೈಕಾಲಜಿ. ಉದ್ಯೋಗಾವಕಾಶಗಳು: ಆಸ್ಪತ್ರೆಗಳು, ಪುನರ್ವಸತಿ ಕೇಂದ್ರಗಳು, ಕ್ರೀಡಾ ಕ್ಲಬ್‌ಗಳು, ಮತ್ತು ಸ್ವಂತ ಕ್ಲಿನಿಕ್. ವೇತನ: ಆರಂಭಿಕ ವೇತನವು ತಿಂಗಳಿಗೆ ಸರಿಸುಮಾರು 25,000 ರಿಂದ 35,000. ಪ್ರಮುಖ ಕೋರ್ಸ್ ಅಂಶಗಳು: ವಿಶೇಷತೆಗಳು: ನ್ಯೂರೋಲಾಜಿ–ಕಲ್, ಕಾರ್ಡಿಯೋವಾಸ್ಕುಲರ್, ಮಹಿಳಾ ಆರೋಗ್ಯ, ಮತ್ತು ಮಕ್ಕಳ ಫಿಸಿಯೋಥೆರಪಿ. ಕೌಶಲ್ಯಗಳು: ವ್ಯಾಯಾಮ ಚಿಕಿತ್ಸೆ, ವಿದ್ಯುತ್ ಚಿಕಿತ್ಸೆ (Electrotherapy), ಮತ್ತು ಪುನರ್ವಸತಿ ತಂತ್ರಗಳು. ಉನ್ನತ ಶಿಕ್ಷಣ: ಕೋರ್ಸ್ ಮುಗಿದ ನಂತರ MPT (Master of Physiotherapy) ಮಾಡಬಹುದು.

## ರೈತ ಮಕ್ಕಳಿಂದ ತೋಟಗಾರಿಕೆ ತರಬೇತಿಗೆ ಅರ್ಜಿ ಆಹ್ವಾನ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಇಲ್ಲಿನ ತೋಟಗಾರಿಕೆ ಇಲಾಖೆಯಿಂದ 2026–27ನೇ ಸಾಲಿಗೆ ಜಿಲ್ಲೆಯ ಆಸಕ್ತಿಯುಳ್ಳ ಅರ್ಹ ರೈತ ಮಕ್ಕಳಿಗೆ ಕೊಪ್ಪಳ ತಾಲ್ಲೂಕಿನ ಮುನಿರಾಬಾದ ತೋಟಗಾರಿಕಾ ತರಬೇತಿ ಕೇಂದ್ರದಲ್ಲಿ 10 ತಿಂಗಳ ತೋಟಗಾ–ರಿಕೆ ತರಬೇತಿ ನಡೆಯಲಿದ್ದು, ಆಸಕ್ತರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.**




ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಹಾಗೂ ಅಂಗವಿಕಲರಿಗೆ ಕನಿಷ್ಠ 18 ವರ್ಷ ಮತ್ತು ಗರಿಷ್ಠ 33 ವರ್ಷ, ಮಾಜಿ ಸೈನಿಕರಿಗೆ 33 ರಿಂದ ಗರಿಷ್ಠ 65 ವರ್ಷ ಹಾಗೂ ಇತರ–ರಿಗೆ ಕನಿಷ್ಠ 18 ವರ್ಷ ಮತ್ತು ಗರಿಷ್ಠ 30 ವರ್ಷದ ಅಭ್ಯರ್ಥಿಗಳು ಕನ್ನಡ ವಿಷಯದೊಂದಿಗೆ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ತೇರ್ಗಡೆಯಾಗಿರಬೇಕು. ತರಬೇತಿ ಪ್ರವೇಶ ಬಯಸುವ ಅಭ್ಯರ್ಥಿಯ ತಂದೆ / ತಾಯಿ /ಪೋಷಕರು ಕಡ್ಡಾಯವಾಗಿ ಜಮೀನು ಹೊಂದಿರಬೇಕು. ಹಾಗೂ ಸ್ವಂತ ಸಾಗುವಳಿ ಮಾಡುತ್ತಿರಬೇಕು. ಮಾಜಿ ಸೈನಿಕರು ಪ್ರವೇಶ ಪಡೆಯಲು ಇಚ್ಚಿಸಿದಲ್ಲಿ ಮೇಲೆ ತಿಳಿಸಿದ ವಿವರಗಳೊಂದಿಗೆ ಇತರೆ ದಾಖಲಾತಿಗಳಾದ Discharge book copy, Personal Pension Order copy, Ex. Serviceman ID card copy ಇತ್ಯಾದಿಗಳನ್ನು ಸಲ್ಲಿಸಬೇಕು. ಅರ್ಜಿಗಳನ್ನು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರುರಾಜ್ಯವಲಯ, ರಾಯಚೂರುಕಛೇರಿ ಅಥವಾ ಇಲಾಖೆಯ ವೆಬ್ ಸೈಟ್ https://horticulturedir.karnataka.gov.in ಮೂಲಕ ಪಡೆದು ಭರ್ತಿ ಮಾಡಿ ಅಗತ್ಯ ದಾಖಲೆಗಳೊಂದಿಗೆ ಏಪ್ರೀಲ್ 15ರ ಸಂಜೆ 05.30ರೊಳಗಾಗಿ ಈ ಕಚೇರಿಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ವಿವರಗಳಿಗೆ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿ, ರಾಜ್ಯ ವಲಯ, ರಾಯಚೂರು ಅಥವಾ ದೂರವಾಣಿ ಸಂಖ್ಯೆ: 9844621424ಗೆ ಕಚೇರಿಯ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸನ್ ರೈಸ್ ಕಾಲೇಜು ವತಿಯಿಂದ ರಾಷ್ಟ್ರೀಯ ಚರ್ಮರೋಗ ತಜ್ಞರ ದಿನಾಚರಣೆ

## ಸಿಂಧನೂರು ನಗರದ ಪ್ರಮುಖ ಚರ್ಮರೋಗ ವೈದ್ಯರಿಗೆ ಗೌರವ ಸನ್ಮಾನ

**ಸಿಂಧನೂರು: ನಗರದ ಪ್ರತಿಷ್ಠಿತ ಸನ್ ರೈಸ್ ಡಿ–ಫಾರ್ಮಸಿ , ನರ್ಸಿಂಗ್, ಪಾರಾ ಮೆಡಿಕಲ್ ಕಾಲೇಜಿನ ವತಿಯಿಂದ 'ರಾಷ್ಟ್ರೀಯ ಚರ್ಮರೋಗ ತಜ್ಞರ ದಿನ'ದ ಅಂಗವಾಗಿ ಸಿಂಧನೂರಿನ ಹೆಸರಾಂತ ಚರ್ಮರೋಗ ತಜ್ಞರನ್ನು ಭೇಟಿ ಮಾಡಿ, ಅವರ ನಿರಂತರ ಸೇವೆಯನ್ನು ಸ್ಮರಿಸಿ ಗೌರವಪೂರ್ವಕವಾಗಿ ಸನ್ಮಾನಿಸಲಾಯಿತು.**



ಮಾನವನ ದೇಹದ ರಕ್ಷಣಾ ಕವಚವಾಗಿರುವ ಚರ್ಮದ ಆರೋಗ್ಯ ಕಾಪಾಡುವುದು ಸವಾಲಿನ ಕೆಲಸ. ಇಂದಿನ ಬದಲಾದ ಜೀವನಶೈಲಿ ಹಾಗೂ ಪರಿಸರ ಮಾಲಿನ್ಯದ ನಡುವೆ ಚರ್ಮದ ಸೋಂಕುಗಳು, ಅಲರ್ಜಿ ಮತ್ತು ಗಂಭೀರ ಕಾಯಿಲೆಗಳ ಚಿಕಿತ್ಸೆಯಲ್ಲಿ ವೈದ್ಯರ ಪಾತ್ರ ಅನನ್ಯವಾದುದು. ಈ ಹಿನ್ನೆಲೆಯಲ್ಲಿ ಸಾರ್ವಜನಿಕರಲ್ಲಿ ಚರ್ಮದ ಆರೋಗ್ಯದ ಬಗ್ಗೆ ಜಾಗೃತಿ ಮೂಡಿಸುತ್ತಿರುವ ನಲ್ಲಾ ಸ್ಕಿನ್ ಕೇರ್ ಆಸ್ಪತ್ರೆಯ ವೈದ್ಯರಾದ ಡಾ. ನಲ್ಲಾ ರಾಕೇಶ್, ಆರೋಗ್ಯಾ ಆಸ್ಪತ್ರೆಯ ವೈದ್ಯರಾದ ಡಾ. ಸಿರಿಷಾ ಹಾಗೂ ಸೂರ್ಯ ಸ್ಕಿನ್ ಕೇರ್ ಆಸ್ಪತ್ರೆಯ ವೈದ್ಯರಾದ ಡಾ. ಸಿಂಧೂರಿ ಇವರುಗಳನ್ನು ಸಂಸ್ಥೆಯ ವತಿಯಿಂದ ಅವರ ಆಸ್ಪತ್ರೆಗಳಿಗೆ ತಲುಪಿ ಸನ್ಮಾನಿಸಿ ಗುರುತಿಸಲಾಯಿತು.

ಸಂಸ್ಥೆಯ ಅಧ್ಯಕ್ಷರಾದ ಇರ್ಫಾನ್ ಕೆ. ಅತ್ತಾರ್ ಅವರು ಮಾತನಾಡಿ, "ವೈದ್ಯರು ಸಮಾಜದ ಸ್ವಾಸ್ಥ್ಯ ಕಾಪಾಡುವ ನಿಜವಾದ ರಕ್ಷಕರು. ಚರ್ಮದ ಸಮಸ್ಯೆಗಳನ್ನು ಕೇವಲ ಸೌಂದರ್ಯದ ದೃಷ್ಟಿಯಿಂದ ನೋಡದೆ, ಒಟ್ಟಾರೆ ಆರೋಗ್ಯದ ಸೂಚಕವಾಗಿ ಪರಿಗಣಿಸಬೇಕು. ನಮ್ಮ ನಗರದ ತಜ್ಞ ವೈದ್ಯರು ಅತ್ಯಾಧುನಿಕ ಚಿಕಿತ್ಸೆಯ ಮೂಲಕ ಜನಸಾಮಾನ್ಯರಿಗೆ ನೆರವಾಗುತ್ತಿರುವುದು ಹೆಮ್ಮೆಯ ವಿಷಯ," ಎಂದು ಶ್ಲಾಘಿಸಿದರು.

ಕಾರ್ಯಕ್ರಮದ ಭಾಗವಾಗಿ ಸನ್ ರೈಸ್ ಸಂಸ್ಥೆಯ ವಿದ್ಯಾರ್ಥಿಗಳು ಮತ್ತು ಉಪನ್ಯಾಸಕರು ಚರ್ಮದ ಆರೈಕೆಯ ಮಹತ್ವದ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಭಿತ್ತಿಪತ್ರಗಳನ್ನು ಪ್ರದರ್ಶಿಸಿದರು. ಸ್ವಯಂ ಚಿಕಿತ್ಸೆಗಿಂತ ತಜ್ಞ ವೈದ್ಯರ ಸಲಹೆ ಪಡೆಯುವುದು ಉತ್ತಮ ಎಂಬ ಸಂದೇಶವನ್ನು ಸಾರಲಾಯಿತು.






ಈ ಸಂದರ್ಭದಲ್ಲಿ ಪ್ರಾಂಶುಪಾಲರಾದ ಲಾಜರ್ ಸಿರಿಲ್ ಜಿ, ಸಂಸ್ಥೆಯ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ವರ್ಗ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದು, ವೈದ್ಯರಿಗೆ ಶುಭಾಶಯಗಳನ್ನು ಕೋರಿದರು.

## ಸಚಿವರಾದ ಎನ್.ಎಸ್.ಭೋಸರಾಜು ರಾಯಚೂರು ಜಿಲ್ಲಾ ಪ್ರವಾಸ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಹಾಗೂ ಕರ್ನಾಟಕ ವಿಧಾನ ಪರಿಷತ್ತು ಸಭಾ ನಾಯಕರಾದ ಎನ್. ಎಸ್.ಭೋಸರಾಜು ಅವರು ಮಾರ್ಚ್ 14, 15ರಂದು ರಾಯಚೂರು ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ.**

**ಮಾರ್ಚ್ 14ರ ಬೆಳಿಗ್ಗೆ 8ಗಂಟೆಗೆ ರಾಯಚೂ–ರಿನಿಂದ ರಸ್ತೆ ಮಾರ್ಗವಾಗಿ ನಿರ್ಗಮಿಸಿ, ಬೆಳಿಗ್ಗೆ 9 ಗಂಟೆಗೆ ತೆಲಂಗಾಣ ರಾಜ್ಯದ ಗದ್ವಾಲ್ ಕ್ಷೇತ್ರದ ಶಾಸಕರಾದ ಬಂಡ್ಲಾ ಕೃಷ್ಣಮೋಹನ್ ರೆಡ್ಡಿ ಅವರ ಕುಟುಂಬದ ವಿವಾಹ ಸಮಾರಂಭದಲ್ಲಿ ಭಾಗಿಯಾಗುವರು.**



ಬೆಳಿಗ್ಗೆ 10ಗಂಟೆಗೆ ಗದ್ವಾಲ್‌ನಿಂದ ರಸ್ತೆ ಮಾರ್ಗವಾಗಿ ನಿರ್ಗಮಿಸಿ, 11ಕ್ಕೆ ರಾಯಚೂ–ರಿಗೆ ಆಗಮಿಸಲಿದ್ದಾರೆ. 11.30ಕ್ಕೆ ರಾಯಚೂರಿನಿಂದ ನಿರ್ಗಮಿಸಿ, 12ಕ್ಕೆ ಜಿಲ್ಲೆಯ ಮಾನವಿಗೆ ಪ್ರಯಾಣ ಬೆಳೆಸಿ, ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗಿಯಾಗುವರು. ಸಂಜೆ 4ಗಂಟೆಗೆ ಮಾನವಿಯಿಂದ ನಿರ್ಗಮಿಸಿ, ಸಂಜೆ 5ಗಂಟೆಗೆ ರಾಯಚೂರಿನಲ್ಲಿ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗಿಯಾಗುವರು.

ಮಾರ್ಚ್ 15ರ ಮಧ್ಯಾಹ್ನ 3ಗಂಟೆಗೆ ರಾಯಚೂರಿನಿಂದ ನಿರ್ಗಮಿಸಿ, ಸಂಜೆ 4ಕ್ಕೆ ಮಾನವಿಗೆ ಆಗಮಿಸಿ ಸಂಜೆ 6ಗಂಟೆಗೆ ಮಾನವಿ ಪಟ್ಟಣದ ಈದ್ಗಾ ಶಾದಿಮಹಲ್‌ನಲ್ಲಿ ರಂಜಾನ್ ಹಬ್ಬದ ಪ್ರಯುಕ್ತ ಏರ್ಪಸಿರುವ ಇಫ್ತಿಯಾರ್ ಕೂಟದಲ್ಲಿ ಭಾಗವಹಿಸುವರು. ರಾತ್ರಿ 8ಗಂಟೆಗೆ ರಾಯಚೂರಿಗೆ ಆಗಮಿಸಿ, ಬಳಿಕ ರೈಲ್ವೆ ಮಾರ್ಗವಾಗಿ ರಾಯಚೂ–ರಿನಿಂದ ಕೇಂದ್ರ ಸ್ಥಾನ ಬೆಂಗಳೂರಿಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಸಚಿವರ ಆಪ್ತ ಕಾರ್ಯದರ್ಶಿಗಳಾದ ವೀರಭದ್ರ ಹಂಚಿನಾಳ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕುಡಿಯುವ ನೀರಿನ ಸಮಸ್ಯೆಗೆ ನಿರ್ಲಕ್ಷ್ಯ ತೋರಿದರೆ ಕ್ರಮ: ತಹಶೀಲ್ದಾರ

ನೈಜ್ಯ ದೆಸೆ ನ್ಯೂಸ್

**ಮುದ್ದೇಬಿಹಾಳ: ತಾಲ್ಲೂಕಿನ ಯಾವುದೇ ಗ್ರಾಮದಲ್ಲಿಯೂ ಕುಡಿಯುವ ನೀರಿನ ತೊಂದರೆ ಉಂಟಾಗದಂತೆ ಅಧಿಕಾರಿಗಳು ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕು. ಸಮಸ್ಯೆ ಬಗೆಹರಿಸುವಲ್ಲಿ ನಿರ್ಲಕ್ಷ್ಯ ತೋರಿದರೆ ಸಂಬಂಧಿತ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ವಿರುದ್ಧ ಜಿಲ್ಲಾಧಿಕಾರಿಗಳ ಗಮನಕ್ಕೆ ತಂದು ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ತಹಶೀಲ್ದಾರ ಕೀರ್ತಿ ಚಾಲಕ ಎಚ್ಚರಿಸಿದರು.**

ಪಟ್ಟಣದ ತಾಲೂಕು ಪಂಚಾಯತಿ ಸಮುದಾಯ ಭವನದಲ್ಲಿ ಗುರುವಾರ ನಡೆದ ತಾಲ್ಲೂಕು ಮಟ್ಟದ ಕುಡಿಯುವ ನೀರಿನ ಟಾಸ್ಕ್‌ಫೋರ್ಸ್ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಬೇಸಿಗೆ ಹಿನ್ನೆಲೆಯಲ್ಲಿ ಜೂನ್ ತಿಂಗಳವರೆಗೆ ಯಾವುದೇ ಗ್ರಾಮದಲ್ಲಿಯೂ ಕುಡಿಯುವ ನೀರಿನ ತೊಂದರೆ ಉಂಟಾಗದಂತೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಹೇಳಿದರು. ಎಲ್ಲಾ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಹಾಗೂ ಇಂಜಿನಿಯರ್‌ಗಳು ಸಮನ್ವಯದಿಂದ ಕಾರ್ಯನಿರ್ವಹಿಸಿ ಸಾರ್ವಜನಿಕರಿಗೆ ನೀರಿನ ಸಮಸ್ಯೆ ಉಂಟಾಗದಂತೆ ನೋಡಿಕೊಳ್ಳಬೇಕು ಎಂದರು. ಸಭೆಯಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು



ನೈರ್ಮಲ್ಯ ಇಲಾಖೆಯ ಇಂಜಿನಿಯರ್ ಎ.ಎಲ್. ರಾಠೋಡ್ ಅವರ ಕಾರ್ಯವೈಖರಿ ಕುರಿತು ತಹಶೀಲ್ದಾರರು ಅಸಮಾಧಾನ ವ್ಯಕ್ತಪಡಿಸಿದರು.

ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸದಿದ್ದರೆ ಮೇಲಧಿಕಾರಿಗಳಿಗೆ ವರದಿ ಸಲ್ಲಿಸಲಾಗುವುದು ಎಂದು ಎಚ್ಚರಿಸಿದರು. ಈ ವೇಳೆ ರಾಠೋಡ್ ಮಾತನಾಡಿ, ಬಹುಹಳ್ಳಿ ಕುಡಿಯುವ ನೀರಿನ ಯೋಜನೆಯ ಗುತ್ತಿಗೆದಾರರಿಗೆ ಬಿಲ್ ಪಾವತಿಯಾಗದ ಕಾರಣ ನಿರ್ವಹಣೆಯಲ್ಲಿ ಅಡಚಣೆ ಉಂಟಾಗಿದೆ ಎಂದು ತಿಳಿಸಿದರು. ಹಣಕಾಸಿನ ಅಡಚಣೆಗಳಿದ್ದರೂ ಸಾರ್ವಜನಿಕರಿಗೆ ನೀರಿನ ತೊಂದರೆ ಉಂಟಾಗದಂತೆ ಪರ್ಯಾಯ ವ್ಯವಸ್ಥೆ ಕಲ್ಪಿಸಬೇಕು ಎಂದು ಅಧಿಕಾರಿಗಳು ಸೂಚಿಸಿದರು. ಸಭೆಯಲ್ಲಿ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಎದುರಾಗಿರುವ ಕುಡಿಯುವ ನೀರಿನ ಸಮಸ್ಯೆಗಳ ಕುರಿತು ಚರ್ಚೆ ನಡೆಯಿತು.

ಬಸರಕೋಡ ಬಹುಹಳ್ಳಿ ಯೋಜನೆಯಿಂದ ಢವಳಗಿ ಗ್ರಾಮಕ್ಕೆ ನೀರು ಪೂರೈಕೆಯಾಗುತ್ತಿಲ್ಲ ಎಂಬ ವಿಷಯವನ್ನು ಪಿಡಿಒಗಳು ಸಭೆಯ ಗಮನಕ್ಕೆ ತಂದರು. ಚವನಭಾವಿ ಸೇರಿದಂತೆ ಕೆಲವು ಗ್ರಾಮಗಳಲ್ಲಿ ನೀರಿನ ಸಮಸ್ಯೆ ಕುರಿತು ಮಾಧ್ಯಮಗಳಲ್ಲಿ ವರದಿಯಾಗಿರುವ ಹಿನ್ನೆಲೆಯಲ್ಲಿ ಮುಂದಿನ ದಿನಗಳಲ್ಲಿ ಸಮಸ್ಯೆ ಉಂಟಾಗದಂತೆ ಮುನ್ನೆಚ್ಚ–ರಿಕೆ ವಹಿಸುವಂತೆ ಸೂಚಿಸಲಾಯಿತು. ರಕ್ಕಸಗಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಬಲದಿನ್ನಿ ಹಾಗೂ ಕಾರಕೂರ ಗ್ರಾಮಗಳಲ್ಲಿ ತೀವ್ರ ನೀರಿನ ಸಮಸ್ಯೆ ಇರುವುದಾಗಿ ತಿಳಿಸಲಾಯಿತು. ತಂಗಡಗಿ ಬಹುಹಳ್ಳಿ ಯೋಜನೆಯಿಂದ ಕಳೆದ ಮೂರು ವರ್ಷಗಳಿಂದ ಈ ಗ್ರಾಮಗಳಿಗೆ ನೀರು ಸರಬರಾಜಾಗಿಲ್ಲ ಎಂದು ಪಿಡಿಒ ಮಾಲಾಶ್ರೀ ಅಮ್ಮಣ್ಣವರು ಮಾಹಿತಿ ನೀಡಿದರು. ಇದಕ್ಕೆ ತಾಲೂಕು ಪಂಚಾಯತಿ ಇಒ ಸಂಬಂಧಿಸಿದ ಇಂಜಿನಿಯರ್‌ಗಳಿಗೆ ಸಮಸ್ಯೆ ಬಗೆಹರಿಸಲು ನಿರ್ದೇಶನ ನೀಡಿದರು. ಚವನಭಾವಿ ಗ್ರಾಮದಲ್ಲಿ ಹೊಸ ಕೊಳವೆಬಾವಿ ಕೊರೆಯಲಾಗಿದ್ದರೂ ನೀರು ಸಿಗದ ಹಿನ್ನೆಲೆಯಲ್ಲಿ ಪರ್ಯಾಯ ವ್ಯವಸ್ಥೆ ಕೈಗೊಳ್ಳಬೇಕು.

ಮಡಿಕೇಶ್ವರ ಹಾಗೂ ತಾರನಾಳ ಗ್ರಾಮಗಳಲ್ಲಿ ಮೋಟಾರ್ ಮತ್ತು ಪೈಪ್‌ಲೈನ್ ಕಾಮಗಾರಿ ತುರ್ತಾಗಿ ಪೂರ್ಣಗೊಳಿಸಬೇಕು. ಕವಡಿಮಟ್ಟಿ ಹಾಗೂ ಸರೂರ ಗ್ರಾಮಗಳಿಗೆ ಬಹುಹಳ್ಳಿ ಯೋಜನೆಯ ನೀರು ಪೂರೈಕೆಯಾಗುತ್ತಿಲ್ಲ ಎಂದು ಪಿಡಿಒ ಕೆ.ಎಚ್. ಕುಂಬಾರ ವಿವರಿಸಿದರು. ಸಭೆಯಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಾದ ಆರ್.ಎಸ್. ಹಿರೇಗೌಡರ, ಡಾ. ಸತೀಶ್ ತಿವಾರಿ, ಪಶುಸಂಗೋಪನೆ ಇಲಾಖೆ ಸಹಾಯಕ ನಿರ್ದೇಶಕ ಶಿವಾನಂದ ಮೇಟಿ, ತಾಲೂಕು ಪಂಚಾಯತಿ ಸಹಾಯಕ ನಿರ್ದೇಶಕ ಮಲ್ಲಿಕಾರ್ಜುನ ಕೋರಿ, ನಾಲತವಾಡ ಉಪತಹಶೀಲ್ದಾರ ಎನ್.ಬಿ. ಮಾವಿನಮಟ್ಟಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಉಪಸ್ಥಿತರಿದ್ದರು.

## ಗಣತಿ ಕಾರ್ಯದ ಪೂರ್ವಸಿದ್ಧತೆ ಹಾಗೂ ತರಬೇತಿ ಕುರಿತು ಜಿಲ್ಲಾ ಮಟ್ಟದ ಸಭೆ

ನೈಜ್ಯ ದೆಸೆ ನ್ಯೂಸ್

**ಗದಗ: 2026ರ ಡಿಜಿಟಲ್ ಜನಗಣತಿಗೆ ಸಿದ್ಧತೆ, ಏಪ್ರಿಲ್‌ನಿಂದ ಮೊದಲ ಹಂತ ಆರಂಭ ಜನಗಣತಿ ಪ್ರಕ್ರಿಯೆಗೆ ಜಿಲ್ಲಾಡಳಿತ ಸಂಪೂರ್ಣವಾಗಿ ಸಜ್ಜಾಗಿದ್ದು, ದೇಶದಲ್ಲೇ ಮೊದಲ ಬಾರಿಗೆ ಕರ್ನಾಟಕದಲ್ಲಿ ಈ ಬೃಹತ್ ಕಾರ್ಯವು ಏಪ್ರಿಲ್ ತಿಂಗಳಿನಿಂದ ಆರಂಭವಾಗಲಿದೆ ಎಂದು ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ. ಆರ್. ಹೇಳಿದರು.**

ನಗರದ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಬುಧವಾರ ಜನಗಣತಿ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ. ಆರ್.ಮಾತನಾಡಿದರು. ಸಂಪೂರ್ಣ ಡಿಜಿಟಲ್ ಮಾದರಿಯಲ್ಲಿ ( ಆಯಪ್ ಮೂಲಕ) ನಡೆಯಲಿರುವ ಈ ಗಣತಿ ಕಾರ್ಯಕ್ಕಾಗಿ ಜಿಲ್ಲೆಯಾದ್ಯಂತ ಅಧಿಕಾರಿಗಳ ತಂಡ ರಚನೆ ಹಾಗೂ ತರಬೇತಿ ಪ್ರಕ್ರಿಯೆಗಳು ಭರದಿಂದ ಸಾಗಿವೆ. ಜನಗಣತಿಯು ಒಟ್ಟು ಎರಡು ಹಂತಗಳಲ್ಲಿ ನಡೆಯಲಿದೆ. ಮೊದಲ ಹಂತ: 2026ರ ಏಪ್ರಿಲ್‌ನಿಂದ ಸೆಪ್ಟೆಂಬರ್‌ವರೆಗೆ ಮನೆಗಳ ಪಟ್ಟಿ ಮತ್ತು ವಸತಿ ಗಣತಿ ನಡೆಯಲಿದೆ. ಎರಡನೇ ಹಂತ: 2027ರಲ್ಲಿ ಜನಸಂಖ್ಯಾ ಗಣತಿ ನಡೆಯಲಿದೆ ಎಂದು ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ ಆರ್. ಸೂಚಿಸಿದರು.



ಏಪ್ರಿಲ್ 1 ರಿಂದ 15ರವರೆಗೆ ಸಾರ್ವಜನಿಕರಿಗೆ ಈ ಬಾರಿಯ ಜನಗಣತಿಯ ವಿಶೇಷತೆಯೆಂದರೆ, ಸಾರ್ವಜನಿಕರೇ ಖುದ್ದಾಗಿ ಪೋರ್ಟಲ್ ಮೂಲಕ ತಮ್ಮ ಮಾಹಿತಿಯನ್ನು ದಾಖಲಿಸಲು ಅವಕಾಶ ಕಲ್ಪಿಸಲಾಗಿದೆ. ಏಪ್ರಿಲ್ 1 ರಿಂದ ಏಪ್ರಿಲ್ 15 ರವರೆಗೆ ಸಾರ್ವಜನಿಕರು ಈ ಸೌಲಭ್ಯವನ್ನು ಬಳಸಿಕೊಳ್ಳಬಹುದು ಎಂದರು. ಏಪ್ರಿಲ್ 16 ರ ನಂತರ ಗಣತಿದಾರರು ಮನೆ–ಮನೆಗೆ ಭೇಟಿ ನೀಡಿ, ದಾಖಲಾದ ಮಾಹಿತಿಯನ್ನು ಪರಿಶೀಲಿಸಲಿದ್ದಾರೆ ಹಾಗೂ ಉಳಿದವರ ಮಾಹಿತಿಯನ್ನು ಆಯಪ್ ಮೂಲಕ ಸಂಗ್ರಹಿಸಲಿದ್ದಾರೆ. ಜಿಲ್ಲಾಡಳಿತದ ಸಿದ್ಧತೆ ಮತ್ತು ಅಧಿಕಾರಿಗಳ ನಿಯೋಜನೆ ಜನಗಣತಿಗಾಗಿ ಜಿಲ್ಲಾಧಿಕಾರಿಗಳು ಪ್ರಧಾನ ಜಿಲ್ಲಾ ಗಣತಿ ಅಧಿಕಾ–ರಿಯಾಗಿ ಮತ್ತು ಅಪರ ಜಿಲ್ಲಾಧಿಕಾರಿಗಳು ಜಿಲ್ಲಾ ಗಣತಿ ಅಧಿಕಾರಿಯಾಗಿ ಕಾರ್ಯನಿರ್ವಹಿಸಲಿದ್ದಾರೆ. ಉಪವಿಭಾಗ ಮಟ್ಟದಲ್ಲಿ ಉಪವಿಭಾಗಾಧಿಕಾರಿ ಅವರು ಉಪವಿಭಾಗೀಯ ಗಣತಿ ಅಧಿಕಾ–ರಿಯಾಗಿರುತ್ತಾರೆ. ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಪೌರಾಯುಕ್ತರು ಹಾಗೂ ತಾಲೂಕು ಮಟ್ಟದಲ್ಲಿ 7 ಜನ ತಹಶೀಲ್ದಾರ್‌ಗಳು 'ಚಾರ್ಜ್ ಅಧಿಕಾರಿಗಳಾಗಿ ನೇಮಕಗೊಂಡಿದ್ದಾರೆ.

ಜಿಲ್ಲೆಯಾದ್ಯಂತ ಒಟ್ಟು 335 ಗ್ರಾಮೀಣ ಪ್ರದೇಶಗಳು ಹಾಗೂ ನಗರ ಪ್ರದೇಶಗಳಲ್ಲಿ ಒಟ್ಟು 209 ವಾರ್ಡ್‌ಗಳನ್ನು ಗಣತಿಗಾಗಿ ಗುರುತಿಸಲಾಗಿದ್ದು ಗಣತಿದಾರರು ಮತ್ತು ಮೇಲ್ವಿಚಾರಕರು ಕಾರ್ಯನಿರ್ವಹಿಸಲಿದ್ದಾರೆ, ಇವುಗಳಲ್ಲಿ ನಿಖರವಾದ ಗಣತಿ ಮಾದರಿಯನ್ನು ಅನುಸರಿಸಲು ಸೂಚಿಸಲಾಗಿದೆ. ಪ್ರತಿಯೊಂದು ತಾಲೂಕಿಗೂ ಒಬ್ಬರಂತೆ ಒಟ್ಟು 7 ಜನ ಕನ್ಸಲ್ಟೆಂಟ್‌ಗಳನ್ನು ನಿಯೋಜಿಸಲಾಗಿದೆ ಎಂದು ತಿಳಿಸಿದರು. ಗಣತಿಗೆ ಸಂಬಂಧಿಸಿದ ನಿಗದಿತ ನಮೂನೆಗಳಲ್ಲಿ ಯಾವುದೇ ಲೋಪವಿಲ್ಲದಂತೆ, ಸಂಪೂರ್ಣವಾದ ಮತ್ತು ನಿಖರವಾದ ವರದಿಯನ್ನು ಸಕಾಲದಲ್ಲಿ ಸಲ್ಲಿಸಬೇಕು ಎಂದು ಅಧಿಕಾ–ರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಗಣತಿ ಕಾರ್ಯವನ್ನು ಯಶಸ್ವಿಯಾಗಿ ನಿರ್ವಹಿಸಲು ತಹಶೀಲ್ದಾರ್ (ತಾಲ್ಲೂಕು ಮಟ್ಟದ ಅಧಿಕಾರಿಗಳು) ಮತ್ತು ಸಂಬಂಧಪಟ್ಟ ಸಿಬ್ಬಂದಿಗಳಿಗೆ ಉನ್ನತ ಮಟ್ಟದ ತರಬೇತಿಯನ್ನು ನೀಡಲು ತೀರ್ಮಾನಿಸಲಾಗಿದೆ. ಈ ತರಬೇತಿಯನ್ನು ಪೂರ್ಣ ಪ್ರಮಾಣದಲ್ಲಿ ಒದಗಿಸಲು ವ್ಯವಸ್ಥೆ ಮಾಡಲಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಡಾ.ದುರಗೇಶ ಕೆ ಆರ್ ತಿಳಿಸಿದರು. ಮುಖ್ಯ ಯೋಜನಾಧಿಕಾರಿ ಎ. ಎ.ಕಂಬಾಳಿಮಠ ಅವರು ಮಾತನಾಡಿ ಡಿಜಿಟಲ್ ಗಣತಿ ಸಿಬ್ಬಂದಿಗೆ ತರಬೇತಿ ಇದು ಸಂಪೂರ್ಣ ಆಯಪ್ ಆದ–ಾರಿತ ಗಣತಿಯಾಗಿರುವುದರಿಂದ, ತಾಂತ್ರಿಕ ನಿರ್ವಹಣೆಗಾಗಿ 19 ಐಟಿ ಸಿಬ್ಬಂದಿಯನ್ನು ನೇಮಿಸಿ ಅವರಿಗೆ ಈಗಾಗಲೇ ತರಬೇತಿ ನೀಡಲಾಗಿದೆ.

ಮಾಸ್ಟರ್ ಟ್ರೈನರ್‌ಗಳಾದ ಕಲ್ಲೂರ್ ಮತ್ತು ಗಿರೀಶ್ ತಿಮ್ಮಪ್ಪ ಅವರುಗಳಿಗೆ ತರಬೇತಿ ನೀಡಲಾಗಿದ್ದು, ಇವರು ಮುಂದಿನ 7–8 ದಿನಗಳಲ್ಲಿ ತಾಲೂಕು ಮತ್ತು ನಗರ ಮಟ್ಟದಲ್ಲಿ ಗಣತಿದಾರರು ಹಾಗೂ ಮೇಲ್ವಿಚಾರಕರಿಗೆ ಪೂರ್ಣ ಪ್ರಮಾಣದ ತರಬೇತಿ ನೀಡಲಿದ್ದಾರೆ. ಗಣತಿದಾರರು ಏಪ್ರಿಲ್ 1 ರೊಳಗೆ ತರಬೇತಿ ಮುಗಿಸಿ, ಆಯಪ್ ಮೂಲಕ ಗಣತಿ ಮಾಡಲು ಸನ್ನದ್ಧರಾಗಲಿದ್ದಾರೆ ಎಂದು ಹೇಳಿದರು. ಜನಗಣತಿಯು ಸಂಪೂರ್ಣವಾಗಿ ಕೇಂದ್ರ ಸರ್ಕಾರದ ರಾಷ್ಟ್ರೀಯ ಕಾರ್ಯಕ್ರಮವಾಗಿದ್ದು, ಇದನ್ನು ರಾಜ್ಯ ಸರ್ಕಾರದ ಅಧಿಕಾರಿಗಳು ಜಾರಿಗೊಳಿಸುತ್ತಿದ್ದಾರೆ. ಜನಗಣತಿ ಕಾರ್ಯಾಚರಣೆ ನಿರ್ದೇಶನಾಲಯದ ರಂಜಿತ್ ಕುಮಾರ್ ಅವರು ಈ ಕಾರ್ಯಕ್ಕೆ ಮಾರ್ಗದರ್ಶನ ನೀಡುತ್ತಿದ್ದಾರೆ.

ಜನಗಣತಿಯು 'ಸೆನ್ಸಸ್ ಕಾಯ್ದೆ'ಯಡಿ ಬರುವುದರಿಂದ, ಈ ಕರ್ತವ್ಯದಲ್ಲಿ 1948 ಸೆನ್ಸಸ್ ಕಾಯ್ದೆ'ಯಡಿ ಕರ್ತವ್ಯ ಲೋಪವಾದರೆ ಕಠಿಣ ಕ್ರಮ ಜರುಗಿಸುವುದು ಯಾವುದೇ ಲೋಪವೆಸಗಿದರೂ ಕಠಿಣ ಕಾನೂನು ಕ್ರಮ ಎದುರಿಸಬೇಕಾಗುತ್ತದೆ ಎಂದು ಅಧಿಕಾರಿಗಳಿಗೆ ಮುಖ್ಯ ಯೋಜನಾಧಿಕಾರಿ ಎ ಎ ಕಂಬಾಳಿ ಮಠ ಅವರು ಎಚ್ಚರಿಕೆ ನೀಡಿದರು.